ವಿಜಯಪುರ | ಸಂಪುಟ 02 | ಸಂಚಿಕೆ 54 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಬುಧವಾರ, ಏಪ್ರಿಲ್ 17, 2024

“ಲೋಕಸಭಾ ಚುನಾವಣೆ ಮಾತ್ರವಲ್ಲದೇ ಮುಂದಿನ ಎಲ್ಲ ಚುನಾವಣೆಗಳಲ್ಲೂ ಜೆಡಿಎಸ್ ಜೊತೆಗೆ ಬಿಜೆಪಿ ಮೈತ್ರಿ ಮುಂದುವ- ರಿಯಬೇಕೆಂಬುದು ಮೋದಿ ಆಶಯವಾಗಿದೆ. ರಾಜ್ಯದ ಎಲ್ಲ ಕ್ಷೇತ್ರಗಳಲ್ಲೂ ಗೆಲುವು ಸಾಧಿಸಲು ನಮ್ಮ ಪ್ರಯತ್ನ ಶುರುವಾಗಿದೆ.”



– ಬಿ.ಎಸ್.ಯಡಿಯೂರಪ್ಪ
ಮಾಜಿ ಮುಖ್ಯಮಂತ್ರಿಗಳು

ರವೀಂದ್ರ ಕಲಾಕ್ಷೇತ್ರದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ । ಇಂದು ಬೆಂಗಳೂರಿನಲ್ಲಿ ಅಂತ್ಯಕ್ರಿಯೆ

# ಹಿರಿಯ ನಟ–ನಿರ್ಮಾಪಕ ದ್ವಾರಕೀಶ ವಿಧಿವಶ

ಬೆಂಗಳೂರು: ಕನ್ನಡ ಚಿತ್ರರಂಗದ ಹಿರಿಯ ನಟ, ನಿರ್ದೇಶಕ ಹಾಗೂ ನಿರ್ಮಾಪಕ ದ್ವಾರಕೀಶ್ ನಿಧನರಾಗಿದ್ದು, ಅಂತ್ಯಕ್ರಿಯೆ ಬುಧವಾರ ಬೆಳಿಗ್ಗೆ 11:30ಕ್ಕೆ ಚಾಮರಾಜಪೇಟೆಯ ಟಿಆರ್ ಮೀಲ್ ನಲ್ಲಿ ನಡೆಯಲಿದೆ.

ದ್ವಾರಕೀಶ ಅವರ ಪಾರ್ಥೀವ ಶರೀರವು ಬುಧವಾರ ಬೆಳಗಿನ ಜಾವದವರೆಗೂ ಅವರ ನಿವಾಸದಲ್ಲಿಯೇ ಇರಲಿದ್ದು, ಗಣ್ಯರ ಮತ್ತು ಕುಟುಂಬಸ್ಥರು ಅಂತಿಮ ದರ್ಶನ ಪಡೆದುಕೊಳ್ಳಲು ವ್ಯವಸ್ಥೆ ಮಾಡಲಾಗಿದೆ.

ಬೆಳಿಗ್ಗೆ 7.30 ರ ನಂತರ ರವೀಂದ್ರ ಕಲಾಕ್ಷೇತ್ರದಲ್ಲಿ ಕಲಾವಿದರು ಹಾಗೂ ಸಾರ್ವಜನಿಕರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. 11 ಗಂಟೆವರೆಗೂ ಅಂತಿಮ ದರ್ಶನಕ್ಕೆ ಅವಕಾಶ ನೀಡಲಾಗಿದ್ದು, 11 ಗಂಟೆಯ ನಂತರ ಶವವನ್ನು ಚಾಮರಾಜಪೇಟೆಯ ಟಿಆರ್ ಮೀಲ್ ಚಿತಾಗಾರಕ್ಕೆ ತರಲಾಗುತ್ತದೆ. ಇಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.



ದ್ವಾರಕೀಶ್ ಅವರ ನಿಧನದ ಕುರಿತು ಈ ಹಿಂದೆ ವದಂತಿಗಳು ಹಬ್ಬಿದ್ದವು. ಈ ಬಾರಿಯೂ ಸಾವಿನ ಸುದ್ದಿ ಫೇಕ್ ಇರಬಹುದು ಎಂದು ಎಲ್ಲರೂ ಭಾವಿಸಿದ್ದರು. ಆದರೆ, ಕುಟುಂಬಸ್ಥರೇ ಸಾವಿನ ಕುರಿತು ಸ್ಪಷ್ಟನೆ ನೀಡಿದ್ದಾರೆ.



“ ರಾತ್ರಿ ಲೂಸ್ ಮೋಷನ್ ಆಗಿ-ತ್ತು. ರಾತ್ರಿಯಿಡೀ ನಿದ್ರೆ ಮಾಡಿರಲಿಲ್ಲ. ಬೆಳಿಗ್ಗೆ ಕಾಫಿ ಕುಡಿದು ಎರಡು ಗಂಟೆ ಮಲಗುತ್ತೇನೆ ಎಂದು ನಿದ್ರಿಸಿದ್ದರು. ಆದರೆ, ಮಲಗಿದವರು ಮೇಲೆ ಏಳಲೇ ಇಲ್ಲ. ಅವರಿಗೆ ಹೃದಯಾಘಾತ ಆಗಿದೆ” ಎಂದು ದ್ವಾರಕೀಶ್ ಅವರ ಪುತ್ರ ಯೋಗೇಶ್ ದ್ವಾರಕೀಶ್ ತಿಳಿಸಿದ್ದಾರೆ.

ದ್ವಾರಕೀಶ್ ಅವರ ನಿಧನವಾರ್ತೆ ತಿಳಿಯುತ್ತಿದ್ದಂತೆ ಕನ್ನಡ ಚಿತ್ರರಂಗದ ಸೆಲೆಬ್ರಿಟಿಗಳು ಹಾಗೂ ಅವರ ಅಭಿಮಾನಿಗಳು ಸಂತಾಪ ಸೂಚಿಸುತ್ತಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಫ್ಯಾನ್ಸ್ ಕೋರುತ್ತಿದ್ದಾರೆ.

## ಸಿಎಂ, ಡಿಸಿಎಂ ಸೇರಿದಂತೆ ಗಣ್ಯರ ಸಂತಾಪ


ಬೆಂಗಳೂರು: ಕನ್ನಡ ಚಿತ್ರರಂಗದ ಹಿರಿಯ ನಟ ದ್ವಾರಕೀಶ್ ಅವರು ವಿಧಿವಶರಾಗಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ, ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ ಪ್ರಹ್ಲಾದ ಜೋಷಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

### ರಾಜ ನುಡಿ

ದೇವರು ಎಲ್ಲಾ ಮನುಷ್ಯರನ್ನು ಒಂದೇ ಮಣ್ಣಿನಿಂದ ಮಾಡಿರಬಹುದು ಆದರೆ ಒಂದೇ ಅಚ್ಚಿನಿಂದಲ್ಲ. ಹೀಗಾಗಿ ಆಕಾರ, ಆಚಾರ, ವಿಚಾರ ಯಾವುದೊಂದರಲ್ಲಿಯೂ ಒಬ್ಬರಿಗೊಬ್ಬರು ಹೋಲಿಕೆಯಾಗುವುದಿಲ್ಲ. ಇದು ಸೃಷ್ಟಿಕರ್ತನ ತಾಕತ್ತು, ಇರಲಿ ಅವನಲ್ಲಿ ನಿಯತ್ತು.

–ಡಾ. ರಾಜಶೇಖರ ನಾಗೂರ

### ವಚನ ಚಿಂತನ 357



*ಅವರ್ಣದಾಗಿಂಗೆ ವರ್ಣದಪರಿವಿಡಿಯಿಂದೆ ಅರಿಯಲುಂಟೆ ?*
*ರೂಪಿಂಗೆ ರೂಪಲ್ಲದೆ ಸಯವಲ್ಲ, ನಿರೂಪಿಂಗೆ ನಿರೂಪವೇ ಸಯವಯ್ಯಾ.*
*ಕಾಣಬಾರದುದ ಕಂಡುಹಿಡಿವರಾರು ನೋಡಾ ಮೂರುಲೋಕದೊಳಗೆ ?*
*ಮಾರಾರಿ ಮಹಿಮರು ನಿಮ್ಮ ಶರಣರಿಗಲ್ಲದೆ ಅರಿಯಬಾರದು,*
*ಗುರುನಿರಂಜನ ಚನ್ನಬಸವಲಿಂಗವನು, ಕುರುಹಳಿದು ಕಾಣಾ.*

ದೇಶಿಕೇಂದ್ರ ಸಂಗನಬಸವಯ್ಯನವರು ಈ ವಚನದಲ್ಲಿ ಲಿಂಗದ ಸ್ವರೂಪವನ್ನು ವಿವರಿಸಿದ್ದಾರೆ. ಬಣ್ಣ(ವರ್ಣ)ದ ಬಲೆಗೆ ಸಿಲುಕದ ಲಿಂಗವನ್ನು (ಬಣ್ಣದ ಸೃಷ್ಟಿಗೆ ಕಾರಣವಾದದ್ದು) ಬಣ್ಣದ ಚಿತ್ರದಲ್ಲಿ ಸೆರೆಹಿಡಿದು ಲಿಂಗವೆಂದು ಅರಿಯಲು ಸಾಧ್ಯವೆ? ಎಂದು ಪ್ರಶ್ನಿಸಿದ್ದಾರೆ. ಮುಂದುವರೆದು ರೂಪಿಗೆ ಪ್ರತಿಯಾಗಿ ಹೋಲಿಸಲು ಮತ್ತೊಂದು ರೂಪವನ್ನೇ ಆಶ್ರಯಿಸಬೇಕಾಗುತ್ತದೆ. ಅದೇ ರೀತಿಯಲ್ಲಿ ನಿರೂಪವನ್ನು ಅರಿತುಕೊಳ್ಳಲು ನಿರೂಪವನ್ನೇ ಅವಲಂಬಿಸಬೇಕಾಗುತ್ತದೆ. ಆದ-ರೆ ಬಸವಾದಿ ಶರಣರು ನಿರೂಪದ ಮಹಾ ಲಿಂಗ(ದೇವರು)ವನ್ನು ರೂಪದಲ್ಲಿ(ಇಷ್ಟಲಿಂಗ) ಕಂಡಿರುವುದನ್ನು “ಕಾಣಬಾರದುದ ಕಂಡುಹಿಡಿವರಾರು ನೋಡಾ ಮೂರು ಲೋಕದೊಳಗೆ ? ಮಾರಾರಿ ಮಹಿಮರು ನಿಮ್ಮ ಶರಣರಿಗಲ್ಲದೆ ಅರಿಯಬಾರದು, ಗುರು ನಿರಂಜನ ಚನ್ನಬಸವಲಿಂಗವನು, ಕುರುಹಳಿದು ಕಾಣಾ” ಎಂದಿದ್ದಾರೆ. ಇದು ಬಸವಾದಿ ಶರಣರ ಹೆಗ್ಗಳಿಕೆ. ಅಗಮ್ಯ ಅಗೋಚರ ಅಪ್ರತಿಮ ಲಿಂಗವನ್ನು ಇಷ್ಟಲಿಂಗದ ಮೂಲಕ ದೃಷ್ಟಿಗೆ ತಂದಿರುವವರು ಬಸವಾದಿ ಶರಣರು..

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ದೇಶದ ಪ್ರಗತಿಗೆ ಕಾಂಗ್ರೆಸ್ ಬೆಂಬಲಿಸಿ :ಸಚಿವ ಶಿವಾನಂದ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತಕ್ಕೆ ಬಂದರೆ ಕಾಂಗ್ರೆಸ್ ಪಕ್ಷವು ನೀಡಿರುವ ಗ್ಯಾರಂಟಿಗಳಾದ ಯುವನ್ಯಾಯ, ಮಹಿಳಾನ್ಯಾಯ, ರೈತನ್ಯಾಯ, ಶ್ರಮಿಕನ್ಯಾಯ, ಪಾಲುದಾರಿಕೆಯ ನ್ಯಾಯ ಜಾರಿಗೆ ಬರುವ ಮೂಲಕ ದೇಶದ ಪ್ರಗತಿಗೆ ನಾಂದಿಯಾಗಲಿದೆ. ಎಲ್ಲ ವರ್ಗದವರ ಹಿತರಕ್ಷಣೆ, ದೇಶದ ಸರ್ವಾಂಗೀಣ ಅಭಿವೃದ್ಧಿಗೆ, ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ರಾಜು ಆಲಗೂರ ಅವರನ್ನು ವಿಜಯಪುರ ಲೋಕಸಭೆ ಕ್ಷೇತ್ರದಿಂದ ಬಹುಮತದೊಂದಿಗೆ ಮತದಾರರು ಆಯ್ಕೆ ಮಾಡಬೇಕೆಂದು ಸಕ್ಕರೆ, ಜವಳಿ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ತಾಲೂಕಿನ ಮುತ್ತಗಿ ಗ್ರಾಮದ ಮಾರುತೇಶ್ವರ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವಿಜಯಪುರ ಲೋಕಸಭಾ ಚುನಾವಣೆಯ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಲೋಕಸಭಾ ಚುನಾವಣೆಯು ದೇಶದ ಭವಿಷ್ಯ ಬರೆಯುವ ಚುನಾವಣೆಯಾಗಿದೆ. ಗ್ರಾಮಗಳಲ್ಲಿರುವ ಸಾಮರಸ್ಯ ಪಟ್ಟಣಗಳಲ್ಲಿ ಇಲ್ಲ. ಸಾಮರಸ್ಯದ ಕೊರತೆಯಿಂದಾಗಿ ಪ್ರಜಾಪ್ರಭುತ್ವಕ್ಕೆ ಧಕ್ಕೆಯಾಗುತ್ತಿದೆ. ಪ್ರಜಾಪ್ರಭುತ್ವದ ಉಳಿವಿಗೆ ಕಾಂಗ್ರೆಸ್ ಪಕ್ಷಕ್ಕೆ ಮತದಾರರು ಬೆಂಬಲಿಸಬೇಕು. ಬಿಜೆಪಿ ಒಂದೇ ಜಾತಿಗೆ ಸೀಮಿತವಾಗಿ ಕೆಲಸ ಮಾಡುತ್ತಿದೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ. ಈ ಮೊದಲು ಮಿಲಟ-ರಿಯಲ್ಲಿ ಜಾತ ಇರಲಿಲ್ಲ. ಅಲ್ಲಿಯೂ ಜಾತಿ ಬೆರೆಸಲಾಗಿದೆ. ಪ್ರಜಾಪ್ರಭುತ್ವ ಅಳಿವಿನ ಅಂಚಿಗೆ ಹೋಗಬಾರದು. ಪ್ರಜಾಪ್ರಭುತ್ವದ ಉಳಿವಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತದಾರರು ಬೆಂಬಲಿಸಬೇಕೆಂದರು.

ಕಳೆದ ಹತ್ತು ವರ್ಷದಲ್ಲಿ ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ನರೇಂದ್ರ ಮೋದಿ ಅವರ ಸರ್ಕಾರ ರೈತರ ಆದಾಯ ದ್ವಿಗುಣ ಮಾಡಲಾಗುವುದು, ಅವರ ಬೆಳೆಗೆ ಸೂಕ್ತ ಬೆಲೆ, ಕಪ್ಪು ಹಣದಿಂದ ಪ್ರತಿಯೊಬ್ಬರ ಖಾತೆಗೆ ರೂ.15 ಲಕ್ಷ, ಪ್ರತಿ ವರ್ಷ ಯುವಜನಾಂಗಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಸೇರಿದಂತೆ ನೀಡಿರುವ ಅನೇಕ ಭರವಸೆಗಳನ್ನು ಈಡೇರಿಸಿಲ್ಲ. ಯುಪಿಎ ಸರ್ಕಾರ ಅವಧಿಯಲ್ಲಿ ಪ್ರಧಾನಿ ಮನಮೋಹನಸಿಂಗ ಅವರು ರೈತರ 72 ಸಾವಿರ ಕೋಟಿ ಸಾಲಮನ್ನಾ ಮಾಡಿದ್ದರು. ಅದೇ ಕೇಂದ್ರ ಬಿಜೆಪಿ ನೇತೃತ್ವದ ಸರ್ಕಾರ ರೈತರ ಸಾಲ ಮನ್ನಾ ಮಾಡದೇ ಉದ್ದಿಮೆದಾರರ ರೂ.14 ಲಕ್ಷ ಕೋಟಿ ಸಾಲಮನ್ನಾ ಮಾಡಿದೆ. ರೈತರ ಬೆಳೆಗೆ ಯೋಗ್ಯ ದರ ನೀಡಲಿಲ್ಲ. ಈಗ ಶ್ರೀಮಂತ–ಬಡವ, ರೈತ–ಕಾರ್ಮಿಕ, ಜಾತಿ ಸಂಘರ್ಷ ಕಡಿಮೆ ಮಾಡಲು ಮತದಾರರು ಬದಲಾವಣೆ ಮಾಡುವ ಅಗತ್ಯವಿದೆ ಎಂದರು.

ರಾಜ್ಯದಲ್ಲಿ ನಮ್ಮ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು 8 ತಿಂಗಳಲ್ಲಿ ಸಮರ್ಪಕವಾಗಿ ಜಾರಿಗೆ ತರುವ ಮೂಲಕ ನುಡಿದಂತೆ ನಡೆದ ಸರ್ಕಾರವಾಗಿದೆ. ನಮ್ಮದು ಹೇಳಿದ್ದನ್ನು ಮಾಡುವ ಸತ್ಯ ನುಡಿಯುವ ಸರ್ಕಾರ. ಕೇಂದ್ರದಲ್ಲಿ ನಮ್ಮ ಸರ್ಕಾರ ಬಂದರೆ ನಾವು ನೀಡಿರುವ 25 ಗ್ಯಾರಂಟಿಗಳನ್ನು ಖಂಡಿತ ಜಾರಿಗೆ ಬರಲಿವೆ. ನಮ್ಮ ಕೇಂದ್ರ ಸರ್ಕಾರದ ಗ್ಯಾರಂಟಿ ಯೋಜನೆ ಜಾರಿಗೆ ಬದಂರೆ ಮಹಿಳೆಯರಿಗೆ ಒಂದು ವರ್ಷಕ್ಕೆ ರೂ. 1 ಲಕ್ಷ, ರೈತರ ಬೆಳೆಗೆ ಸೂಕ್ತ ಬೆಲೆ ಅನೇಕ ಯೋಜನೆಗಳು ಜಾರಿಗೆ ಬರಲಿವೆ ಎಂದರು.



ನಾನು ವಿಜಯಪುರ, ಬಾಗಲಕೋಟ, ಹಾವೇರಿ ಜಿಲ್ಲೆಗಳಲ್ಲಿ ಚುನಾವಣಾ ಪ್ರಚಾರ ಕಾರ್ಯದಲ್ಲಿ ತೊಡಗಿಕೊಳ್ಳಬೇಕಾಗಿರುವದರಿಂದಾಗಿ ಬಸವನಬಾಗೇವಾಡಿ ಮತಕ್ಷೇತ್ರದಲ್ಲಿ ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರು ಭಿನ್ನಾಭಿಪ್ರಾಯ ಮರೆತು ಎಲ್ಲ ಜಾತಿಯವರು ನಮ್ಮ ಸರ್ಕಾರ ಸಾಧನೆ, ಕ್ಷೇತ್ರದಲ್ಲಿಯಾಗಿರುವ ಸಾಧನೆ ನೋಡಿ ನನ್ನ ವಿಧಾನಸಭೆ ಚುನಾವಣೆಯಲ್ಲಿ ನೀಡಿದ ಮತಗಳಗಿಂತಲೂ ಹೆಚ್ಚು ಮತಗಳನ್ನು ನೀಡುವ ಮೂಲಕ ರಾಜು ಆಲಗೂರ ಅವರನ್ನು ಆಯ್ಕೆ ಮಾಡಲು ಶ್ರಮಿಸಬೇಕೆಂದರು.

ಶಿವಮೊಗ್ಗದಲ್ಲಿ ಕೆ.ಎಸ್.ಈಶ್ವರಪ್ಪನವರ ಕುರಿತು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಪಕ್ಷದಿಂದ ಹೊರಹಾಕುವುದಾಗಿ ಹೇಳಿದ್ದಾರೆ. ಅದೇ 2 ವರ್ಷದಿಂದ ಬಸನಗೌಡ ಪಾಟೀಲ ಯತ್ನಾಳ ಅವರು ಅಪ್ಪ–ಮಗನ ಬಗ್ಗೆ ಬೈಯುತ್ತಾ ಬಂದಿದ್ದರೂ ಅವರ ಮೇಲೆ ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಎಲ್ಲರಿಗೂ ಒಂದೇ ನ್ಯಾಯ ಇರಬೇಕೆ ತಾನೇ ಎಂದು ಪ್ರಶ್ನಿಸಿದ ಅವರು, ಈಚೆಗೆ ಯತ್ನಾಳ ಅವರು ನನ್ನ ಬಗ್ಗೆ ಒಂದೆರಡು ದಿನಗಳಿಂದ ಹೇಳಿಕೆ ನೀಡುತ್ತಿದ್ದಾರೆ ಎಂದರು.

ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಮಾತನಾಡಿ, ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದೆ. ನಿರುದ್ಯೋಗ ಸಮಸ್ಯೆ ಹೆಚ್ಚಾಗಿದೆ. ಲೋಕಸಭೆಗೆ ಸ್ಪರ್ಧಿಸುವ ಅಭ್ಯರ್ಥಿಗೆ ರಾಷ್ಟ್ರದ ಅರಿವು ಇರಬೇಕು. ಕಳೆದ 30 ವರ್ಷಗಳಿಂದ ಲೋಕಸಭೆಯನ್ನು ಪ್ರತಿನಿಧಿಸುತ್ತಿರುವ ರಮೇಶ ಜಿಗಜಿಣಗಿ ಅವರು ಜಿಲ್ಲೆಯ ಜ್ವಲಂತ ಸಮಸ್ಯೆಗಳ ಬಗ್ಗೆ ಒಮ್ಮೆಯೂ ಲೋಕಸಭೆಯಲ್ಲಿ ಧ್ವನಿ ಎತ್ತಿಲ್ಲ. ಜಿಲ್ಲೆಯ ನೀರಾವರಿ, ಕೈಗಾರಿಕೆ ಬಗ್ಗೆ ಯಾವುದೇ ಕಾರ್ಯ ಮಾಡಿಲ್ಲ. ರಸ್ತೆಗಳು ತಾನಾಗಿಯೇ ಆಗಿರುವದನ್ನು ತಾವು ಮಾಡಿರುವುದಾಗಿ ಹೇಳುತ್ತಾರೆ. ರೈಲು ಬ್ರಾಡ್ಗೇಜ್ ಎನ್ಡಿಟಿಸಿಯಿಂದ ಆಗಿದೆ ಎಂದರು.

ಜಿಲ್ಲೆಯ ಮತದಾರರರು ನನ್ನ ಆಯ್ಕೆ ಮಾಡಿದರೆ ಜಿಲ್ಲೆಯ ಅಭಿವೃದ್ಧಿಗೆ ಜೀತದಾಳಾಗಿ ದುಡಿಯುತ್ತೇನೆ. ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯನವರ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆ, ಈ ಕ್ಷೇತ್ರದಲ್ಲಿ ಶಿವಾನಂದ ಪಾಟೀಲರು ಮಾಡಿರುವ ಅಭಿವೃದ್ಧಿ ಗಮನಿಸಿ ಜಿಲ್ಲೆಯ ಮತದಾರರು ನನಗೆ ಮತ ನೀಡಬೇಕೆಂದು ಮನವಿ ಮಾಡಿದರು.

ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ರಮೇಶ ಸೂಳಿಭಾವಿ, ಚಂದ್ರಶೇಖರಗೌಡ ಪಾಟೀಲ, ಸಂಗಮೇಶ ಓಲೇಕಾರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸುರೇಶ ಹಾರಿವಾಳ, ಮುಖಂಡರಾದ ಬಸವರಾಜ ಸೋಮಪುರ, ಮಲ್ಲಿಕಾರ್ಜುನ ನಾಯಕ, ಪ್ರೇಮಕುಮಾರ ಮ್ಯಾಗೇರಿ, ಎ.ಎಂ.ಪಾಟೀಲ, ಶಂಕರಗೌಡ ಬಿರಾದಾರ, ರವಿ ರಾಠೋಡ, ರಾಜುಗೌಡ ಪಾಟೀಲ, ಶಿವನಗೌಡ ಗುಜಗೊಂಡ, ಜಗದೇವಿ ಗುಂಡಳ್ಳಿ, ನೀಲಾ ಬಿರಾದಾರ, ರಮಜಾನ ಹೆಬ್ಬಾಳ, ಬಂದೇನವಾಜ ಡೋಲಚಿ, ಭೀಮಶಿ ಜಗ್ಗಲ, ಇಲಿಯಾಸ ದೊಡ್ಡಮನಿ, ಮಹಿಬೂಬ ನಾಯ್ಕೋಡಿ, ನಾಗನಗೌಡ ಬಿರಾದಾರ ಸೇರಿದಂತೆ ಇತರರು ಇದ್ದರು. ರವಿ ರಾಠೋಡ ನಿರೂಪಿಸಿದರು. ದ್ಯಾಮನಗೌಡ ಪಾಟೀಲ ವಂದಿಸಿದರು.

# ಸಮರ್ಪಕ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ರೈತರ ಪ್ರತಿಭಟನೆ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಪಟ್ಟಣ ಸೇ-ರಿದಂತೆ ಸ್ಥಳೀಯ ಜಮೀನುಗಳಿಗೆ ನೀಡಲಾಗುವ ವಿದ್ಯುತ್ ವ್ಯವಸ್ಥೆಯಲ್ಲಿ ನಿರಂತರ ನಿಲುಗಡೆಯಾಗುತ್ತಿದ್ದು, ಕೂಡಲೇ ಸಮರ್ಪಕವಾಗಿ ವಿದ್ಯುತ್ ಪೂರೈಸುವಂತೆ ಆಗ್ರಹಿಸಿ ರೈತರು, ಸಾರ್ವಜನಿಕರು ಹೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ಮಂಗಳವಾರ ಹೆಸ್ಕಾಂ ಕಚೇರಿ ಆವರಣಕ್ಕೆ ಬಂದ ರೈತರು ಹಾಗೂ ಸಾರ್ವಜನಿಕರು ವಿದ್ಯುತ್ ಪೂರೈಕೆಯ ಕುರಿತು ಅಸಮಾಧಾನ ವ್ಯಕ್ತಪಡಿಸಿ ಶಾಖಾಧಿಕಾರಿ ಯು.ಎಲ್.ಪಟ್ಟಣ, ಗ್ರಾಮೀಣ ಶಾಖಾಧಿಕಾರಿ ಅಶೋಕ ಕಂದಗಲ್ ಹಾಗೂ ಸಿಬ್ಬಂದಿ ಶಿವಾನಂದ ಕೊಡಗೆ ಅವರ ಜೊತೆ ವಾಗ್ವಾದಕ್ಕಿಳಿದರು. ಈ ಸಂದರ್ಭದಲ್ಲಿ ಸಿಬ್ಬಂದಿ ಕೆಲವು ತಾಂತ್ರಿಕ ಕಾರಣಗಳಿಂದಾಗಿ ಪೂರೈಕೆಯಲ್ಲಿ ವ್ಯತ್ಯಯವಾಗಿದೆ. ಒಂದು ವಾರದಲ್ಲಿ ಯಥಾ ಪ್ರಕಾರ ವಿದ್ಯುತ್ ಪೂರೈಸಲಾಗುವುದು ಎಂದು ಸಮಜಾಯಿಷಿ ನೀಡಿದರೂ ಕೇಳದ ಸಾರ್ವನಿಕರು ಎಇಇ ಅವರು ಬಂದು ಉತ್ತರಿಸಿವಂತೆ ಪಟ್ಟು ಹಿಡಿದರು. ಕೊನೆಗೆ ಸಭೆಯಲ್ಲಿ ನಿರತವಾಗಿದ್ದ ಎಇಇ ಗಂಗಾಧರ ಲೋಣಿ ಮೊಬೈಲ್ ಮೂಲಕ ಮಾತನಾಡಿ ವಿದ್ಯುತ್ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದಾಗ, ಪ್ರತಿಭಟನಾಕಾರರು ಬರುವ ಮಂಗಳವಾರದ ಒಳಗಾಗಿ ವಿದ್ಯುತ್ ಸಮರ್ಪಕವಾಗಿ ಪೂರೈಸಬೇಕು ಇಲ್ಲವಾದಲ್ಲಿ ಮತ್ತೇ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿ ಪ್ರತಿಭಟನೆ ಕೊನೆಗೊಳಿಸಿದರು.

ಬಿಜೆಪಿ ಮಂಡಲದ ಖಜಾಂಚಿ ಸೋಮಶೇಖರ ಹಿರೇಮಠ, ಹಿಂದುಳಿದ ವರ್ಗಗಳ ಮೋರ್ಚಾ ಪ್ರಧಾನಕಾರ್ಯದರ್ಶಿ ರಮೇಶ ಈಳಗೇರ, ಕಾಶೀನಾಥ ಕೋರಿ, ರಾವುತ ಅಗಸರ, ಮಲ್ಲಿಕಾರ್ಜುನ ಕೋರಿ, ರೈತರಾದ ರಾಮು ದೇಸಾಯಿ, ಸಂಪತ್ ಜಮಾದಾರ, ಗುರು ಜಡಗೊಂಡ, ಕೆ.ಕೆ.ಭಾವಿಮನಿ, ಕಾಸುಗೌಡ ಬಿರಾದಾರ(ಜಿರ್ಲಿ), ಸುನೀಲ ದೇಸಾಯಿ, ಮಹೇಶ ಯಾಳಗಿ, ಕಾಸು ಹಡಪದ, ಈರಣ್ಣ ದಿಂಡವಾರ, ಸಿದ್ದು ವಾಡೇದಮನಿ, ಮಡು ದಿಂಡವಾರ, ಬಸು ಕುಂಬಾರ, ಅಶೋಕ ರಾಮಗೊಂಡ, ಕಾಶೀನಾಥ ಮಡಗೊಂಡ, ಕಾಸು ದಾನಗೊಂಡ, ಸಿದ್ದು ದಿಂಡವಾರ, ಉಮೇಶ ಕೋಟಿನ್, ಮುತ್ತು ಭಾವಿಕಟ್ಟಿ, ಪಿಂಟೂ ಭಾಸುತ್ಕರ್ ಇದ್ದರು.

## ವಿಜಯಪುರದಲ್ಲಿ ಮತದಾನ ಜಾಗೃತಿ ಮೂಡಿಸಲು ಕ್ಯಾಂಡಲ್ ಮಾರ್ಚ್ ಜಾಥಾ

# ಮತದಾನ ಮಾಡಿ ದೇಶದ ಏಳ್ಗೆಗೆ ಸಹಕರಿಸಿ :ಟಿ.ಭೂಬಾಲನ್

ಉದಯರಶ್ಮಿ ನ್ಯೂಸ್

ವಿಜಯಪುರ: ಮತದಾನ ಮಾಡಿ ದೇಶದ ಏಳಿಗೆಗೆ ಸಹಕರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿಗಳಾದ ಟಿ.ಭೂಬಾಲನ್ ಹೇಳಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವಿಜಯಪುರ, ಮಹಾನಗರ ಪಾಲಿಕೆ ವಿಜಯಪುರ ಹಾಗೂ ಇವರ ಸಹಯೋಗದಲ್ಲಿ ಲೋಕಸಭಾ ಚುನಾವಣೆ 2024ರ ಹಿನ್ನೆಲೆಯಲ್ಲಿ ಮತದಾನ ಜಾಗೃತಿ ಮೂಡಿಸಲು ಹಮ್ಮಿಕೊಂಡ ಕ್ಯಾಂಡಲ್ ಮಾರ್ಚ್ ಜಾಥಾ ಕಾರ್ಯಕ್ರಮ ಚಾಲನೆ ನೀಡಿ ಮಾತನಾಡಿದರು.

ಎಲ್ಲರೂ ತಪ್ಪದೇ ಮತದಾನ ಮಾಡುವುದರ ಜೊತೆಗೆ ನೆರೆಹೊರೆಯುವರನ್ನು ಮತದಾನ ಮಾಡುವಂತೆ ಜಾಗೃತಿ ಮೂಡಿಸಬೇಕು. ಪ್ರಜ್ಞಾವಂತ ನಾಗರೀಕರಾಗಿ ದೇಶದ ಏಳಿಗೆಗ ಮತದಾನ ಮಾಡುವುದನ್ನು ಮರೆಯಬಾರದು ಎಂದು ಹೇಳಿದರು.



ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಮತ್ತು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಹಾಗೂ ಸಹಾಯಕ ಚುನಾವಣಾ ಅಧಿಕಾರಿಗಳು ವಿಜಯಪುರ ನಗರ ಲೋಕಸಭಾ ಮತಕ್ಷೇತ್ರ ಹಾಗೂ ಮಹಾನಗರ ಪಾಲಿಕೆ ಆಯುಕ್ತ ಅಶಾದ ಉರ್ ರೆಹಮಾನ್ ಶರೀಫ್ ಮಾತನಾಡಿದರು.

ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ನಗರದ ಹೃದಯ ಭಾಗವಾಗಿರುವ ಗಾಂಧಿ ವೃತ್ತದವರೆಗೆ ಮತದಾನ ಜಾಗೃತಿಗಾಗಿ ಮೇಣದ ಬತ್ತಿ ಬೆಳಗುವ ದೀಪ ಅಥ-’ವಾ ಕ್ಯಾಂಡಲ್ ಮಾರ್ಚ್ ಜಾಥಾ ಅತ್ಯಂತ ವಿಜೃಂಭಣೆಯಿಂದ ಜರುಗಿತು. ಮಹಾನಗರ ಪಾಲಿಕೆಯ ಉಪ ಆಯುಕ್ತ ಮಹಾವೀರ ಬೋರಣ್ಣವರ ಮತದಾರರಿಗೆ ಪ್ರತಿಜ್ಞಾವಿಧಿಯನ್ನು ಭೋಧಿಸಿದರು

ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿಗಳಾದ ಸಿ. ಆರ್ ಮುಂಡರಗಿ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾ-ರಿಗಳಾದ ಎ. ಬಿ ಅಲ್ಲಾಪೂರ, ವಿಜಯಪುರ ತಾ.ಪಂ. ಇಓ ಕೆ. ಹೊಂಗಯ್ಯ, , ತಾಲೂಕ ವೈದ್ಯಾಧಿಕಾರಿಗಳು ಹಿಟ್ನಳ್ಳಿ ಬಸವರಾಜ ಜಗಳೂರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿ, ಜಿಲ್ಲಾ ಘಟಕದ ನೋಡಲ್ ಅಧಿಕಾ-ರಿಗಳಾದ ಪ್ರಕಾಶ ರಾಠೋಡ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿಗಳಾದ ಸಾಕ್ಷಿ ಹಿರೇಮಠ, ರಾಜೇಶ ಪವಾರ, ಸಹನಾ ಕುಡಿಗನೂರ, ಮಹಾನಗರ ಪಾಲಿಕೆಯ ಸಂಘಟನಾಧಿಕಾರಿಗಳಾದ ಸಾವಿತ್ರಿ ತಿಪ್ಪನ್ನವರ್, ಭಾರತೀಯ ಕೌಲ್ಗೆ, ಸಿಆರ್‌ಪಿಗಳಾದ ಪ್ರಗತಿ ಕುಲಕರ್ಣಿ ಪ್ರಿಯಾಂಕ ಪಾಟೀಲ್ ಶ್ವೇತಾ ತೆಲ್ಸಂಗ ಮಮತಾ ಹಾಗೂ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು, ಮಹಾನಗರ ಪಾಲಿಕೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ಸ್ವ ಸಹಾಯ ಸಂಘಗಳ ಮಹಿಳೆಯರು, ಆಶಾ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಬ್ಯಾಂಕ್ & ಅಂಚೆಕಚೇರಿಗಳಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**



ವಿಜಯಪುರ: ಮತದಾನದ ದಿನದಂದು ಕಡ್ಡಾಯವಾಗಿ ಮತಗಟ್ಟೆಗಳಿಗೆ ತೆರಳಿ ಎಲ್ಲರೂ ಮತದಾನ ಮಾಡಬೇಕು. ಮತದಾನ ದಿನದಂದು ಮತಗಟ್ಟೆಗಳಲ್ಲಿ ನೆರಳಿನ ವ್ಯವಸ್ಥೆ, ಕುಡಿಯುವ ನೀರು, ವಿಶೇಷಚೇತನರಿಗೆ ರ್‍ಯಾಂಪ್ ವ್ಯವಸ್ಥೆ, ಮತ್ತು ಇತರೆ ವ್ಯವಸ್ಥೆಗಳನ್ನು ಮಾಡಲಾಗಿರುತ್ತದೆ. ಮತದಾನ ಮಾಡಿ ಚುನಾವಣೆ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೊಡೆಲ್ ಅಧಿಕಾರಿ ಸಿ.ಆರ್. ಮುಂಡರಗಿ ಹೇಳಿದರು.

ಮಂಗಳವಾರ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಇವರ ಸಹಯೋಗದಲ್ಲಿ ಜಿಲ್ಲಾ ವಿಜಯಪುರ ನಗರದ ವಿವಿಧ ಬ್ಯಾಂಕ್‌ಗಳಿಗೆ ಹಾಗೂ ಅಂಚೆ ಕಛೇರಿಗಳಿಗೆ ತೆರಳಿ ಬ್ಯಾಂಕ್ ಅಧಿಕಾರಿಗಳು, ಸಿಬ್ಬಂದಿಯವರು ಹಾಗೂ ಗ್ರಾಹಕ-ರಿಗೆ ಹಮ್ಮಿಕೊಂಡ ಮತದಾರರ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಲೀಡ್ ಬ್ಯಾಂಕ್‌ನ ವ್ಯವಸ್ಥಾಪಕ ನರೇಂದ್ರಬಾಬು ಮಾತನಾಡಿ, ಮತದಾನ ಮಾಡುವುದು ನಮ್ಮ ಹಕ್ಕು, ಅಷ್ಟೇ ಅಲ್ಲದೇ ನಮ್ಮ ಜವಾಬ್ದಾರಿಯೂ ಸಹ. ತಾವೆಲ್ಲರೂ ಮತದಾನ ಮಾಡಿದರೆ ಮಾತ್ರ ನಮ್ಮ ದೇಶ ಅಭಿವೃದ್ಧಿಯಾಗಲು ಸಾಧ್ಯ. ನಿಮ್ಮ ಒಂದು ಮತ ದೇಶಕ್ಕೆ ಅತೀ ಮುಖ್ಯ. ಆದ್ದರಿಂದ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ ಎಂದರು.

ಸ್ಟೇಟ್ ಬ್ಯಾಂಕ್‌ನ ಮುಖ್ಯ ವ್ಯವಸ್ಥಾಪಕರಾದ ವಾಣಿಶ್ರೀ ಉಮರಾಣಿ ಮಾತನಾಡಿ, ವಿಶೇಷವಾಗಿ ಜಿಲ್ಲೆಯ ಪ್ರತಿ ಮತಕ್ಷೇತ್ರಗಳಲ್ಲಿ ಪ್ರತ್ಯೇಕವಾಗಿ ಮಹಿಳೆಯರಿಗೋಸ್ಕರ ಮಹಿಳಾ ಸ್ನೇಹಿ ಮತಗಟ್ಟೆ(ಪಿಂಕ್/ಸಖಿ ಬೂತ್)ಗಳನ್ನು ಅಲಂಕರಿಸಲಾಗಿದೆ. ಆದ್ದರಿಂದ ಎಲ್ಲ ಮಹಿಳೆಯರು ನಿರ್ಭೀತಿಯಿಂದ ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡಬೇಕು ಎಂದರು.

ಬಳಿಕ ಎಲ್ಲರೂ ಮತದಾರರ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿದರು ಮತ್ತು ಮತದಾನ ಜಾಗೃತಿಯ ಘೋಷಣೆಗಳನ್ನು ಕೂಗಿದರು. ವಿವಿಧ ಬ್ಯಾಂಕ್ ಗಳ ಗೋಡೆಗಳ ಮೇಲೆ ಮತದಾನ ಜಾಗೃತಿಯ ವಿವಿಧ ಪೋಸ್ಟರ್ ಗಳನ್ನು ಅಂಟಿಸಲಾಯಿತು. ಮತದಾನ ಜಾಗೃತಿಯ ಕರಪತ್ರಗಳನ್ನು ಬ್ಯಾಂಕ್ ಗಳ ವ್ಯವಸ್ಥಾಪಕರಿಗೆ ಹಸ್ತಾಂತ-ರಿಸಲಾಯಿತು.

ಜಿಲ್ಲಾ ಅಂಚೆ ಕಚೇರಿಯಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ:

ವಿಜಯಪುರ ಜಿಲ್ಲೆಯ ಅಂಚೆ ವಿಭಾಗ ಕಚೇರಿಗೆ ಭೇಟಿ ನೀಡಿ ಅಂಚೆ ಇಲಾಖೆಯಲ್ಲಿ ಮತದಾನ ಜಾಗೃತಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಕುರಿತು ಕಛೇರಿಯ ಅಧೀಕ್ಷಕರಾದ ಜಿ. ಬಿ ನಾಯಕರವರೊಂದಿಗೆ ಚರ್ಚಿಸಲಾಯಿತು. ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಮತದಾನ ಜಾಗೃತಿಗಾಗಿ ತಯಾರಿಸಿರುವ ಶೀಲುಗಳು, ಕರಪತ್ರಗಳು ಮತ್ತು ಪೋಸ್ಟರ್ ಗಳನ್ನು ಹಸ್ತಾಂತ-ರಿಸಲಾಯಿತು. ಮತದಾನ ಪ್ರಮಾಣ ಹೆಚ್ಚಿಸಲು ವಿಜಯಪುರ ಜಿಲ್ಲೆಯ ಅಂಚೆ ವಿಭಾಗದ ಅಡಿಯಲ್ಲಿ ಬರುವ ಎಲ್ಲ ಅಂಚೆ ಕಛೇರಿಗಳಿಗೆ ಬರುವ ಗ್ರಾಹಕರಿಗೆ ಮತದಾನ ಜಾಗೃತಿ ಮೂಡಿಸಿ ಜಿಲ್ಲಾ ಪಂಚಾಯತಿಗೆ ಮಾಹಿತಿ ನೀಡಲು ವಿನಂತಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿಗಳಾದ ಎ. ಬಿ. ಅಲ್ಲಾಪೂರ, ಕೆನರಾ ಬ್ಯಾಂಕ್ ಮುಖ್ಯ ವ್ಯವಸ್ಥಾಪಕರಾದ ದಾರಾವತ್ ವೀರಣ್ಣ, ಹಿರಿಯ ವ್ಯವಸ್ಥಾಪಕರಾದ ವಿಷ್ಣುವರ್ಧನ ರೆಡ್ಡಿ, ಕೆನರಾ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ಅನಿಲ ಮೋರೆ, ಸ್ಟೇಟ್ ಬ್ಯಾಂಕ್‌ನ ಕ್ರೆಡಿಟ್ ಮ್ಯಾನೆಜರ್ ಕೃಷ್ಣಯ್ಯ, ಆಪರೇಷನ್ಸ್ ಮ್ಯಾನೇಜರ್ ಪಿ.ಆರ್ ದೇಸಾಯಿ, ಅಂಚೆ ವಿಭಾಗದ ಉಪ ಅಧೀಕ್ಷಕರಾದ ವ್ಹಿ. ವ್ಹಿ. ನಿಂಬರಗಿ, ಕಚೇರಿ ಸಹಾಯಕರಾದ ವ್ಹಿ. ಎಸ್. ಉಮರಾಣಿ, ವಿವಿಧ ಬ್ಯಾಂಕ್ ಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ, ಜಿಲ್ಲಾ ಪಂಚಾಯತಿಯ ಸಿ. ಸಿ ಕುಲಕರ್ಣಿ, ವಿಶ್ವನಾಥ ಶಹಾಪೂರ, ಸುವರ್ಣ ಭಜಂತ್ರಿ, ಹಾಗೂ ಇತರರಿದ್ದರು.

# ದೇಶಕ್ಕೆ ಆರ್ಥಿಕ ಸಂಕಷ್ಟ ತಂದೊಡ್ಡಿದ ಮೋದಿ :ನಾಡಗೌಡ

**ಉದಯರಶ್ಮಿ ನ್ಯೂಸ್**



**ಮಿಣಜಗಿ (ಮುದ್ದೇಬಿಹಾಳ):**ಮೋದಿ ಸರಕಾರದ ಸುಳ್ಳು ಭರವಸೆ, ಭಾವನೆ ಕೆರಳಿಸುವ ವಿಚಾರ ಬೇಕೋ ಕಾಂಗ್ರೆಸ್ ಪಕ್ಷದ ಕಳಕಳಿ ಯೋಜನೆಗಳು ಬೇಕೊ ನೀವೇ ನಿರ್ಧರಿಸಿ ಎಂದು ಶಾಸಕ ಹಾಗೂ ಸಾಬೂನು-ಮಾರ್ಜಕ ನಿಗಮದ ಆಧ್ಯಕ್ಷರಾದ ಸಿ.ಎಸ್.ನಾಡಗೌಡ ಅಪ್ಪಾಜಿ ಹೇಳಿದರು.

ಮುದ್ದೇಬಿಹಾಳ ಕ್ಷೇತ್ರದ ಮಿಣ-ಜಗಿಯಲ್ಲಿ ಮಂಗಳವಾರ ನಡೆದ ಜಿಪಂ ವ್ಯಾಪ್ತಿಯ ಸಭೆಯಲ್ಲಿ ಮಾತನಾಡಿ, ರಾಜ್ಯ ಸರಕಾರ ನುಡಿದಂತೆ ನಡೆದುಕೊಂಡು ಹೆಣ್ಣುಮಕ್ಕಳ, ಯುವಕರ ಮನಸ್ಸು ಗೆದ್ದಿದೆ. ಕೆಲವೇ ತಿಂಗಳಲ್ಲಿ ಹೇಳಿದ್ದ ಗ್ಯಾರಂಟಿ ಭರವಸೆಗಳನ್ನು ಈಡೇ-ರಿಸಿದೆ. ಮೋದಿಯವರು ನೀಡಿದ್ದ ಯಾವೊಂದು ಮಾತನ್ನೂ ಉಳಿಸಿಕೊಂಡಿಲ್ಲ. ಬದಲಾಗಿ ದೇಶಕ್ಕೆ ಆರ್ಥಿಕ ಸಂಕಷ್ಟ ತಂದೊಡ್ಡಿದ್ದಾರೆ ಎಂದು ಹೇಳಿದರು.

ವಿದ್ಯಾವಂತ, ಪ್ರಬುದ್ಧ ಅಭ್ಯರ್ಥಿ ರಾಜು ಆಲಗೂರರಿಗೆ ಮತ ನೀಡಿದರೆ ಅದು ವ್ಯರ್ಥವಾಗುವುದಿಲ್ಲ. ದಶಕಗಳ ಮೇಲಾಯ್ತು ಲೋಕಸಭೆಯಲ್ಲಿ ಕಾಂಗ್ರೆಸ್ ಗೆದ್ದಿಲ್ಲ. ಕಾರಣ ಏನೇ ಇರಲಿ, ಇದೀಗ ನಮ್ಮ ಲೋಕಸಭೆ ಸದಸ್ಯ ಹೇಗಿರಬೇಕು ನೀವು ನಿರ್ಧ-ರಿಸಬೇಕು. ನೀವು ನೀಡಿದ ಮತ ಸಮಾನತೆ, ಸಾಮರಸ್ಯ, ಸುಭದ್ರತೆ ಹಾಗೂ ಅಭಿವೃದ್ಧಿಗೆ ಎಂದು ಹೇಳಿದರು.

ಕೃಷ್ಣಾ ನದಿ ನೀರಿನ ಹಂಚಿಕೆ ಬಗೆಹಸಿಸಲಿಲ್ಲ. ಯಾವೊಂದು ಜ್ವಲಂತ ಸಮಸ್ಯೆಗಳನ್ನು ಬಿಜೆಪಿಯವರು ಬಗೆಹರಿಸಲಿಲ್ಲ. ನೀರಿನ ಬಳಕೆ ಸರಿಯಾಗಿದ್ದರೆ ನಮ್ಮ ಬದುಕು ಬಂಗಾರವಾಗುತ್ತಿತ್ತು. ಒಂದೆಡೆ ರಾಜ್ಯ ಸರಕಾರ ಅನೇಕ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಿದೆ. ಕೇಂದ್ರ ಸರಕಾರ ರಾಜ್ಯಕ್ಕೆ ನೆಟ್ಟಗಿನ ಬರ ಪರಿಹಾರ ಕೊಡಲಿಲ್ಲ ಕೋರ್ಟ್ ಛೀಮಾರಿ ಹಾಕುವ ಪ್ರಸಂಗ ಒದಗಿತು. ನೀರಿನ ಪಾಲೂ ಇಲ್ಲ. ಗಡಿ ವಿವಾದವೂ ಬಗೆ ಹರಿಸಲಿಲ್ಲ. ದೇಶದೆಲ್ಲೆಡೆ ವಿಪ್ಲವ ಪರಿಸ್ಥಿತಿ ಇದೆ. ಇಂತಹ ಮೋದಿಯವರ ಸರಕಾರ ನಮಗೆ ಬೇಕೆ? ದೇವರ ಹೆಸರೇಳಿ ಅಧಿಕಾರ ಮಾಡುತ್ತಾರೆ ಇವರಿಗೆ ನಾಚಿಕೆ ಇಲ್ಲವೇ ಎಂದು ಖಾರವಾಗಿ ಪ್ರಶ್ನಿಸಿದರು.

ಉದ್ಯೋಗ, ಮೂಲಭೂತ ಸಮಸ್ಯೆ ನೀಗಿಸದೇ ದೇಶ ಹಾಗೂ ರಾಜ್ಯಗಳಲ್ಲಿ ಬಿಜೆಪಿ ಆರ್ಥಿಕ ದಿವಾಳಿತನ ಸೃಷ್ಟಿಸಿದೆ. ಹಾಗಾಗಿ ಕಾಂಗ್ರೆಸ್ ನಮಗೆ ಅನಿವಾರ್ಯವಾಗಿದೆ. ಇಂದಿನ ಯುವಕರಿಗೆ ಬುದ್ಧಿ ಹೇಳಿ ಭ್ರಷ್ಟ, ಸುಳ್ಳಿನ ಕೇಂದ್ರ ಸರಕಾರವನ್ನು ಓಡಿಸಬೇಕು. ನಲವತ್ತು ಸಾವಿರ ಕೋಟಿ ರೂ.ಗಳನ್ನು ಬಾಂಡ್‌ಗಳ ಮೂಲಕ ಸಂಗ್ರಹಿಸಿದ್ದಾರೆ. ಸುಪ್ರೀಂ ಕೋರ್ಟ್‌ನ ಗಟ್ಟಿತನದಿಂದ ಇದು ಹೊರಬಂತು. ಇದರಿಂದ ಸ್ವಚ್ಛತೆ ಮುಖ ಹಾಕಿದವರು ಬಯಲಾಗಿ ಹತಾಶೆಗೊಂಡಿದ್ದಾರೆ. ಅದಕ್ಕಾಗಿ ಬಸವೇಶ್ವರ ಹಾಗೂ ಅಂಬೇಡ್ಕರ್‌ರ ದಾರಿಯ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಹೇಳಿದರು.

ಅಭ್ಯರ್ಥಿ ಪ್ರೊ.ರಾಜು ಆಲಗೂರ ಮಾತನಾಡಿ, ನಮ್ಮ ಗ್ಯಾರಂಟಿಗಳನ್ನೇ ದೇಶದೆಲ್ಲೆಡೆ ಕಾಪಿ ಮಾಡಲಾಗುತ್ತಿದೆ. ಗ್ಯಾರಂಟಿಗಳಿಂದ ದೇಶ ದಿವಾಳಿ ಆಗುತ್ತೆ ಎಂದು ಟೀಕಿಸಿದ ಮೋದಿಯವರೇ 'ಮೋದಿ ಗ್ಯಾರಂಟಿ' ಎಂದು ಪ್ರಚಾರ ಪಡೆಯುತ್ತಿರುವುದು ವಿಪರ್ಯಾಸ. ಇಲ್ಲಿನ ಬಿಜೆಪಿ ಸಂಸದ ಕಳೆದ ಹದಿನೈದು ವರ್ಷಗಳ ಅಧಿಕಾರ ಅನುಭವಿಸಿದರೇ ಹೊರತು ಏನೊಂದು ಕೆಲಸ ಮಾಡಲಿಲ್ಲ ಎಂದರು.

'ನೀವು ನನ್ನ ಮೇಲೆ ವಿಶ್ವಾಸ ಇಟ್ಟರೆ ನಿಮ್ಮ ಜೀತದ ಆಳಾಗಿ ದುಡಿಯುತ್ತೇನೆ. ಜಿಲ್ಲೆಗೆ ಬೇಕಿರುವ ಅಗತ್ಯ ಸೌಲಭ್ಯಗಳನ್ನು ಒದಗಿಸುತ್ತೇನೆ. ಈ ಸಲ ಜಿಲ್ಲೆಗಾಗಿ ಬದಲಾವಣೆ ಮಾಡಿ. ನನಗೆ ಕೊಡುವ ಮತ ನಾಡಗೌಡರಿಗೆ, ಸಿದ್ದರಾಮಯ್ಯರ ಕಾಳಜಿಗೆ' ಎಂದು ಮನವಿ ಮಾಡಿದರು.

ಶಿವಶಂಕರಗೌಡ ಹಿರೇಗೌಡ ಪ್ರಸ್ತಾವಿಕ ಮಾತನಾಡಿ, ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳ ಸಾಫಲ್ಯತೆ ಹಾಗೂ ಕೇಂದ್ರದಲ್ಲಿ ಕಾಂಗ್ರೆಸ್ ನೀಡಿರುವ ಗ್ಯಾರಂಟಿ ಭರವಸೆಗಳನ್ನು ವಿವರಿಸಿದರು. ನಿವೃತ್ತ ಪೊಲೀಸ್ ಅಧಿಕಾರಿ ಎಸ್.ಎಸ್. ಹುಲ್ಲೂರ ಮಾತನಾಡಿ, ತಕ್ಕಡಿಯಲ್ಲಿ ತೂಗಿ ಯಾರಿಂದ ಕೆಲಸವಾಗುತ್ತದೆ ಎಂದು ಯೋಚಿಸಿ ಅವರಿಗೆ ನಿಮ್ಮ ಪವಿತ್ರ ಮತ ನೀಡಿ ಎಂದು ಕೋ-ರಿದರು.

ಹಿರಿಯ ಮುಖಂಡರಾದ ಬಿ.ಎಸ್. ಪಾಟೀಲ ಯಾಳಗಿ, ಶಕೀಲ್ ಖಾಜಿ, ಅಕ್ಕಮಹಾದೇವಿ ಕಟ್ಟಿಮನಿ, ಸಿದ್ದನಗೌಡ ಪಾಟೀಲ, ಸಿ.ಬಿ.ಅಸ್ಕಿ, ಕಾಶೀಂ ಪಟೇಲ, ಜೆ.ಬಿ. ಪಾಟೀಲ, ಅಶೋಕಗೌಡ ಪಾಟೀಲ, ಬಸವನಗೌಡ ಬಗಲಿ, ಶಿವಾನಂದಯ್ಯ ಹಿರೇಮಠ, ಐ.ಜಿ.ಯರನಾಳ ಅನೇಕರಿದ್ದರು.

ವೀರೇಶ ಪಾಟೀಲ ಸ್ವಾಗತಿಸಿದರು,

# ಮತದಾನ ಜಾಗೃತಿ: 10 ಅಡಿ ಉದ್ದದ ಬಲೂನ್ ಅಳವಡಿಕೆ





**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಮಹಾನಗರ ಪಾಲಿಕೆಯ ಕಚೇರಿಯ ಮೇಲೆ ಲೋಕಸಭಾ ಚುನಾವಣೆ 2024ರ ಮತದಾನ ಜಾಗೃತಿ ಕುರಿತು 10 ಅಡಿ ಉದ್ದ 10 ಅಡಿ ಅಗಲದ ಬಲೂನ್‌ನ್ನು ಸ್ಥಾಪಿಸಲಾಯಿತು.

ಈ ಸಂದರ್ಭ ಸಹಾಯಕ ಚುನಾವಣಾ ಅಧಿಕಾರಿಗಳು ವಿಜಯಪುರ ನಗರ ಲೋಕಸಭಾ ಮತಕ್ಷೇತ್ರ ಹಾಗೂ ಮಹಾನಗರ ಪಾಲಿಕೆ ಆಯುಕ್ತರು ಅಶಾದ ಉರ್ ರೆಹಮಾನ್ ಶರೀಫ್, ಮಹಾನಗರ ಪಾಲಿಕೆಯ ಉಪ ಆಯುಕ್ತ ಮಹಾವೀರ ಬೋರಣ್ಣವರ, ಸಹಾಯಕ ನಗರ ಯೋಜನಾಧಿಕಾರಿ ಲಕ್ಷ್ಮಣ್ ಮೊರೆ, ವಲಯ 3 ಕಂದಾಯ ಅಧಿಕಾರಿ ರವಿ ಶರಶಾಡ ಪರಿಷತ್ ಕಾರ್ಯದರ್ಶಿ ರವಿ ರಂಗಸುಬೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಆಯುಷ್ ವೈದ್ಯನಿಂದ ಮತದಾನದ ಜಾಗೃತಿ

**ಉದಯರಶ್ಮಿ ನ್ಯೂಸ್**




ವಿಜಯಪುರ: ಪ್ರತಿಬಾರಿ ಸಾರ್ವತ್ರಿಕ ಚುನಾವಣೆಗಳು ಬಂದಾಗ ಮತದಾನದ ಪ್ರಮಾಣವನ್ನು ಹೆಚ್ಚಿಸಲು , ಮತದಾನದ ಮಹತ್ವ ಕುರಿತು ಜಿಲ್ಲಾಡಳಿತಗಳು ಜಾಗೃತಿಯನ್ನು ಮೂಡಿಸುತ್ತವೆ. ಜಿಲ್ಲೆಯ ಆಲಮೇಲದ ಆಯುಷ್ ವೈದ್ಯ ಡಾ ಸಮೀರ ಹಾದಿಮನಿ ತಮ್ಮ ಆಸ್ಪತ್ರೆಗೆ ಬರುವ ರೋಗಿಗಳಿಗೆ ವಿಶಿಷ್ಟ ರೀತಿಯಲ್ಲಿ ಮತದಾನದ ಜಾಗ್ರತಿ ಮೂಡಿಸುತ್ತಿದ್ದಾರೆ.

ಪ್ರಿಸ್ಕ್ರಿಪ್ಶನ್ ಚೀಟಿ, ಪ್ರಯೋಗಾಲಯದ ವರದಿಗಳ ಮೇಲೆ "ನಿಮ್ಮ ಮತ ಅಮೂಲ್ಯ, ತಪ್ಪದೇ ಮತದಾನ ಮಾಡಿ" ಎಂಬ ವಾಕ್ಯವನ್ನು ವಿವಿಧ ಆಕಾರದ ಸೀಲ್ ಗಳ ಮೂಲಕ ಮುದ್ರಿಸಿ ರೋಗಿಗಳಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ. ಅಲ್ಲದೆ ವ್ಯಂಗ್ಯಚಿತ್ರಗಳ ಮೂಲಕ ಸಾಮಾಜಿ-ಕ ಜಾಲತಾಣಗಳಲ್ಲಿ ಮತದಾನದ ಮಹತ್ವ ಸಾರುತ್ತಿದ್ದಾರೆ.

# ಮಡಿವಾಳ ಮಾಚಿದೇವರ ರಥೋತ್ಸವ ಸಂಪನ್ನ

**ಉದಯರಶ್ಮಿ ನ್ಯೂಸ್**




ದೇವರ ಹಿಪ್ಪರಗಿ: ಮಡಿವಾಳ ಮಾಚಿದೇವರ ರಥೋತ್ಸವ ಹಾಗೂ ಪಲ್ಲಕ್ಕಿ ಮಹೋತ್ಸವ ಸಾವಿರಾರು ಭಕ್ತವೃಂದದೊಂದಿಗೆ ವಿಜೃಂಭಣೆಯಿಂದ ಜರುಗಿತು.

ಪಟ್ಟಣದಲ್ಲಿ ಮಾಚಿದೇವರ ರಥೋತ್ಸವದ ಅಂಗವಾಗಿ ಸೋಮವಾರ ಗದ್ದುಗೆಮಠದಲ್ಲಿ ಸಾಂಪ್ರದಾಯಿಕವಾಗಿ ನಡೆದು ಬಂದ ಪೂಜಾ ವಿಧಿವಿಧಾನಗಳು ಬೆಳಿಗ್ಗೆ ಹೋಮ ಹವನದೊಂದಿಗೆ ಆರಂಭಗೊಂಡವು. ನಂತರ ಆರಾ ಎಂದೇ ಕರೆಯಲಾಗುವ ಪ್ರಕೃತಿಗೆ ಆಹಾರ ನೀಡುವುದು ಜರುಗಿ-ತು. ಆನಂತರ ಮಾಚಿದೇವರನ್ನು ಹೊತ್ತ ಪಲ್ಲಕ್ಕಿ ಗದ್ದುಗೆಮಠದಿಂದ ಹೊರಟು ಮೇನ್ ಬಜಾರಿನಲ್ಲಿರುವ ತೇರಿನವರೆಗೆ ಸಾಗಿ 5 ಸುತ್ತು ಪ್ರದಕ್ಷಿಣೆ ಹಾಕಿ ನೈವೇದ್ಯ (ಬಡ್ಯಾಣ) ಅರ್ಪಿಸಲಾಯಿತು. ತದನಂತರ ಬೆಳಿಗ್ಗೆಯಿಂದಲೇ ಹೂವಿನ ಹಾರ, ತಳಿರು ತೋರಣಗಳಿಂದ ಶೃಂಗಾರಗೊಂಡ ರಥ (ತೇರ) ಕ್ಕೆ ನೆರೆದ ಸಾವಿರಾರು ಜನ ಭಕ್ತರ ಜಯಕಾರ, ಉದ್ಘೋಶಗಳ ಮೂಲಕ ಕಳಸಾರೋಹಣ ನೆರವೇರಿಸಿ ಚಾಲನೆ ನೀಡಲಾಯಿತು. ರಥೋತ್ಸವಕ್ಕೆ ಈ ಬಾರಿ ಯಾವುದೇ ಅಡ್ಡಿ ಆತಂಕಗಳಿಲ್ಲದ ಕಾರಣ ಯುವಭಕ್ತ ಸಮೂಹ ಉತ್ಸಾಹದಿಂದ ರಥ-'ವನ್ನು ಸರಾಗವಾಗಿ ಮಾನೆದೊಡ್ಡಿ ಹತ್ತಿರದವರೆಗೆ ಎಳೆದು ತಮ್ಮ ಭಕ್ತಿ, ಭಾವ ತೋರಿದರು.

ಈ ಸಮಯದಲ್ಲಿ ಮಹಿಳೆಯರು, ಮಕ್ಕಳು, ಯುವಕರು ತಾವು ತಂದ ಉತ್ತತ್ತಿ, ಬಾಳೆಹಣ್ಣುಗಳನ್ನು ರಥ-'ೋತ್ಸವ ಸಾಗುವಾಗ ಅದರ ಮೇಲೆ ಎರೆಚಿ ಸಂತಸಪಟ್ಟರು. ನಂತರ ಮಾಚಿದೇವರನ್ನು ಹೊತ್ತ ಪಲ್ಲಕ್ಕಿ ಉತ್ಸವ ಹೊರವಲಯದ ಮಡಿವಾಳ ಮಾಚಿದೇವರ ದೇವಸ್ಥಾನದವರೆಗೆ ಮೆರವಣಿಗೆಯಲ್ಲಿ ತೆರಳಿ ಪುನಃ ಮರಳಿ ಗದ್ದಿಗೆಮಠಕ್ಕೆ ಬಂದು ಸೇರಿತು.

ಬೆಳಿಗ್ಗೆಯಿಂದ ಆರಂಭವಾದ ಈ ಎಲ್ಲ ಧಾರ್ಮಿಕ ಕಾರ್ಯಗಳಲ್ಲಿ ಪಟ್ಟಣದ ಭಕ್ತಸಮೂಹ ಶ್ರದ್ಧಾ ಭಕ್ತಿಯಿಂದ ಪಾಲ್ಗೊಂಡು ಮಾಚಿದೇವರ ಕೃಪೆಗೆ ಪಾತ್ರವಾಯಿತು. ಇನ್ನೂ ಹೆಸ್ಕಾಂ ಇಲಾಖೆ ರಥಭೀದಿಯಲ್ಲಿ ವಿದ್ಯುತ್ ಪೂರೈಕೆ ತಾತ್ಕಾಲಿಕವಾಗಿ ನಿಲ್ಲಿಸಿ ವಿದ್ಯುತ್ ತಂತಿಗಳಿಂದ ಆವಘಡಗಳು ಸಂಭವಿಸದಂತೆ ನಿಗಾ ವಹಿಸಿತು. ಪೊಲೀಸ್ ಇಲಾಖೆಯ ಸಿಬ್ಬಂದಿ ರಥೋತ್ಸವದಲ್ಲಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಸೂಕ್ತ ಕ್ರಮ ವಹಿಸಿದ್ದರು.

# ಕಾಂಗ್ರೆಸ್ ಅಭ್ಯರ್ಥಿ ಜಿ.ಕುಮಾರ್ ನಾಯಕ್ ಮತಯಾಚನೆ



**ಉದಯರಶ್ಮಿ ನ್ಯೂಸ್**

ಕೆಂಭಾವಿ: ಪಟ್ಟಣದ ಮಹಾ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ ರಾಯಚೂರು ಲೋಕಸಭೆಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಜಿ ಕುಮಾರ್ ನಾಯಕ ಚುನಾವಣೆ ಪ್ರಚಾರದ ಅಂಗವಾಗಿ ಮಂಗಳವಾರ ಶಹಾಪುರ ವಿಧಾನಸಭಾ ಕ್ಷೇತ್ರದ ಕೆಂಭಾವಿ ಬ್ಲಾಕ್ ಕಾಂಗ್ರೆಸ್ ಸಮೀತಿಯ ಕಾರ್ಯಕರ್ತರ ಸಭೆಯಲ್ಲಿ ಸಣ್ಣ ಕೈಗಾರಿಕೆ ಸಚಿವ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ಗೌಡ ದರ್ಶನಾಪುರ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಜಿ ಕುಮಾರ್ ನಾಯಕ ಹಾಗೂ ಕೆಂಬಾವಿ ಬ್ಲಾಕ್ ಕಾಂಗ್ರೆಸ್ ಪಕ್ಷದ ಮುಖಂಡ ಸಿದ್ದನಗೌಡ ಪೊಲೀಸ್ ಪಾಟೀಲ್, ನಿಂಗನಗೌಡ ಮಾಲಿಪಾಟೀಲ್, ಶರಣಬಸವ ಡಿಗ್ಗಾವಿ, ವೈಪಾಲ್ ರೆಡ್ಡಿ ಸಾಹುಕಾರ ಡಿಗ್ಗಾವಿ, ವಾಮನರಾವ್ ದೇಶಪಾಂಡೆ, ಕಾಜಾ ಪಟೇಲ್ ಕಾಚೂರ್, ಆರಿಫ್ ಹುಸೇನ್ ಖಾಜಿ, ರಂಗಪ್ಪ ವಡ್ಡರ್, ದೇವು ಮ್ಯಾಗೇರಿ, ಸಾಹಿಬುಲಾಲ ಅಂ-ದೇಹಲಿ, ಶಂಕರ್ ಖಾನಾಪುರ್, ಮೈನುದ್ದಿನ್ ಸಾಸನೂರ್, ಅಜಿಜ್ ಪಾಶ ಖಾಜಿ, ಇಸ್ಮೈಲ್ ಜಮಾದಾರ, ತಿಪ್ಪಣ್ಣ ಯಾಳಗಿ, ಪರಶುರಾಮ ಬಳಬಟ್ಟಿ ಮತ್ತು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

# ಮುತ್ತುರಾಜ್ ಗೆ ಅಂಬೇಡ್ಕರ ರತ್ನ ಪ್ರಶಸ್ತಿ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಭೀಮ ಆರ್ಮಿ ಭಾರತ ಏಕತಾ ಮಿಷನ್ ಮಾನವ ಹಕ್ಕುಗಳ ಹೋರಾಟ ಸಮಿತಿ ತಾಲೂಕಾಧ್ಯಕ್ಷ ಮುತ್ತುರಾಜ ಬಾಗೇವಾಡಿ ಅವರಿಗೆ ಚಿಮ್ಮಲಗಿ ಗ್ರಾಮದ ಅಂಬೇಡ್ಕರ ಭವನದಲ್ಲಿ ಹಮ್ಮಿಕೊಂಡಿದ್ದ ಡಾ.ಬಾಬಾಸಾಹೇಬ ಅಂಬೇಡ್ಕರ ಜಯಂತಿ ಕಾರ್ಯಕ್ರಮದಲ್ಲಿ ಅಂಬೇಡ್ಕರ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಗಿರಿಯಪ್ಪ ತಳವಾರ, ಮುಖಂಡರಾದ ಪರಶುರಾಮ ಚಲವಾದಿ, ವಿಜಯಕರ, ಮುದ್ದೇಬಿಹಾಳ ಇತರರು ಇದ್ದರು.

# ವಿಕಲಚೇತನ ಅಧಿಕಾರಿ ಕರ್ತವ್ಯದಲ್ಲಿ ಅದಮ್ಯ ಚೇತನ!

**ಉದಯರಶ್ಮಿ ನ್ಯೂಸ್**

ಇಂಡಿ: ದೇಶ ನನಗೇನು ಕೊಟ್ಟಿದೆ ಅನ್ನವುದಕ್ಕಿಂತ ದೇಶಕ್ಕೆ ನಾನೇನು ಕೊಟ್ಟೆ ಮಹತ್ವ ಎನ್ನುವ ನಾನ್ನುಡಿ ಭಾರತೀಯರಿಗೆ ಸರ್ವಕಾಲಿಕ ಸತ್ಯವಾಗಿರುವ ಮೌಲ್ಯದ ಮಾತು. ಈ ಮಾತಿಗೆ ಅನುಗುಣವಾಗಿ ಇಂಡಿ ಕಂದಾಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಶಿರಸ್ತೆದಾರ ಎಸ್ ಆರ್ ಮುಜಗೊಂಡ ಅವರು ಕಾರ್ಯ ಉದಾಹರಣೆಯಾಗಿದೆ.

> " ತಮ್ಮ ಅಸಾಧಾರಣ ಕೌಶಲಗಳಿಂದ ಲೋಕಸಭಾ ಚುನಾವಣೆಗಾಗಿ ಕರ್ತವ್ಯ ನಿರ್ವಹಿಸುತ್ತಿರುವ ಮುಜಗೊಂಡ ಅವರ ಕರ್ತವ್ಯ ಶ್ಲಾಘನೀಯ."
>
> **– ಅಬೀದ್ ಗದ್ಯಾಳ**
> **ಅಸಿಸ್ಟೆಂಟ್ ಕಮಿಷನರ್, ಇಂಡಿ**

ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ, 2024 ರ ಲೋಕಸಭಾ ಚುನಾವಣೆ ಹಿನ್ನೆಲೆ ಏಕಗವಾಕ್ಷಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಸ್ ಆರ್ ಮುಜಗೊಂಡ ಕಾರಣ-ರಾಗಿದ್ದಾರೆ. ಏಕೆ ಗೊತ್ತಾ..? ಚುನಾವಣೆ ಕಾರ್ಯ ಬಂದಾಗ,



ಎಷ್ಟೋ ಜನರು ದೈಹಿಕ ಮಾನಸಿಕ ಸದೃಡವಿದ್ದರೂ ವಿವಿಧ ಕಾರಣಗಳ ನೆಪವೊಡ್ಡಿ ಚುನಾವಣೆ ಕಾರ್ಯದಿಂದ ತಪ್ಪಿಸಿಕೊಳ್ಳುವ ಪ್ರಯತ್ನ ಮಾಡುತ್ತಾರೆ. ಹಾಗೆ ಶಿಕ್ಷೆಗೆ ಕೂಡಾ ಒಳಗಾಗುವುದು ಸಾಮನ್ಯ.

ಆದರೆ ಇಂಡಿ ತಹಶಿಲ್ದಾರ ಕಛೇರಿಯಲ್ಲಿ ಶಿರಸ್ತೆದಾರರಾಗಿ ಸೇವೆ ಸಲ್ಲಿಸುತ್ತಿರುವ ಎಸ್ ಆರ್ ಮುಜಗೊಂಡ ಅವರು ದೈಹಿಕವಾಗಿ ವಿಕಲಚೇತನ ವಿದ್ದರೂ..! ಚುನಾವಣೆ ಆಯೋಗದಿಂದ ವಿನಾಯಿತಿ ಇದ್ದರೂ..! ಸಹ ಕರ್ತವ್ಯ ನಿರ್ವಹಿಸುತ್ತಿದ್ದು, ಅವರ ಸೇವೆ ಕರ್ತವ್ಯ ಹಾಗೂ ರಾಷ್ಟ್ರೀಯ ಪ್ರಜ್ಞೆಗೆ ಕೈಗನ್ನಡಿಯಾಗಿದೆ.

# ಕನ್ನಡ ಚಿತ್ರರಂಗದ ಕುಳ್ಳ ಖ್ಯಾತಿಯ ದ್ವಾರಕೀಶ :ಒಂದು ನೆನಪು

**ಉದಯರಶ್ಮಿ ದಿನಪತ್ರಿಕೆ**

ಕನ್ನಡ ಚಿತ್ರರಂಗಕ್ಕೆ ತನ್ನದೆ ಆದ ಇತಿಹಾಸವಿದೆ. ಅದು ಇತ್ತೀಚಿನ ದಿನಗಳಲ್ಲಿ ಸಾಧಿಸಿರುವ ಸಾಧನೆ ಕಡಿಮೆಯದೇನಲ್ಲ. ಕನ್ನಡ ಚಿತ್ರರಂಗದ ಇತಿಹಾಸದಲ್ಲಿ ಅಸಾಧಾರಣ ಪ್ರತಿಭೆ ತೋರಿದ ನಿರ್ದೇಶಕರು, ಕಲಾವಿದರು, ತಂತ್ರಜ್ಞರು, ಚಿತ್ರಸಾಹಿತಿಗಳು ಆಗಿಹೋಗಿದ್ದಾರೆ. ಅವರಲ್ಲಿ ದ್ವಾರಕೀಶ ಕೂಡ ಒಬ್ಬರಾಗಿ, ಕನ್ನಡ ಸಾಂಸ್ಕೃತಿಕ ಲೋಕಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ.

ಸ್ಯಾಂಡಲ್‌ವುಡ್‌ನ ಹಿರಿಯ ನಟ, ನಿರ್ದೇಶಕ,ನಿರ್ಮಾಪಕ ದ್ವಾರಕೀಶ ಅವರು 1942 ಆಗಸ್ಟ್ 19 ರಂದು ಮೈಸೂರು ಜಿಲ್ಲೆಯ ಹುಣಸೂರಿನಲ್ಲಿ ಜನಿಸಿದ್ದರು. ಬಂಗ್ಲೆ ಶಾಮರಾವ ದ್ವಾರಕಾನಾಥ ಎಂಬುದು ದ್ವಾರಕೀಶ ಅವರ ನಿಜನಾಮ. ಇವರ ತಂದೆ ಶಾಮರಾವ ಮತ್ತು ತಾಯಿ ಜಯಮ್ಮ.

ಇವರು ತಮ್ಮ ಪ್ರಾಥ-'ಮಿಕ ಮತ್ತು ಪ್ರೌಢ ಶಿಕ್ಷಣವನ್ನು ಶಾರದ ವಿಲಾಸ ಮತ್ತು ಬನುಮಯ್ಯ ಶಾಲೆಯಲ್ಲಿ ಮುಗಿಸಿ, ನಂತರ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮೆಕ್ಯಾನಿಕಲ್ ಇಂಜಿನಿಯ-ರಿಂಗ್ ಮಾಡಿದ್ದರು. ನಂತರ ತಮ್ಮ ಸಹೋದರನ ಜೊತೆ ಸೇರಿ ಭಾರತ್ ಆಟೋ ಸ್ಪೇರ್ ಸ್ಟೋರ್ ಆರಂಭಿಸಿದರು.1963ರಲ್ಲಿ ವ್ಯಾಪಾರ ಬಿಟ್ಟು ಸಿನೆಮಾ ನಟನೆಯನ್ನು ಆಯ್ದುಕೊಂಡರು.

1964ರಲ್ಲಿ ವೀರ ಸಂಕಲ್ಪ ಎಂಬ ಸಿನಿಮಾ ಮೂಲಕ ಕನ್ನಡ ಚಿತ್ರರಂಗಕ್ಕೆ ಪ್ರವೇಶ ಮಾಡಿದರು.1966ರಲ್ಲಿ ತುಂಗಾ ಬ್ಯಾನರ್ಸ್‌ನಡಿ ಮಮತೆಯ ಬಂಧನ ಎಂಬ ಸಿನಿಮಾದ ಸಹ ನಿರ್ಮಾಪಕರಾದರು. 1969ರಲ್ಲಿ ಮೇಯರ್ ಮುತ್ತಣ್ಣ ಮೂಲಕ ಮೊದಲ ಬಾರಿಗೆ ಸ್ವತಂತ್ರ ನಿರ್ಮಾಪಕರಾದರು. ಇದು ಡಾ. ರಾಜಕುಮಾರ ಮತ್ತು ಭಾರತಿ ಅವರು ಮುಖ್ಯ ಭೂಮಿಕೆಯಲ್ಲಿ ನಟಿಸಿದ ಅತ್ಯುತ್ತಮ ಸಿನಿಮಾ. ಮೇಯರ್ ಮುತ್ತಣ್ಣದ ಬಳಿಕ ಸ್ಯಾಂಡಲ್‌ವುಡ್‌ಗೆ ಹಲವು ಯಶಸ್ವಿ ಚಲನಚಿತ್ರಗಳನ್ನು ನೀಡಿದ ಅವರು



200 ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿ, 53 ಸಿನಿಮಾಗಳನ್ನು ನಿರ್ಮಿಸಿದ ಖ್ಯಾತಿ ದ್ವಾರಕೀಶಗೆ ಸಲ್ಲುತ್ತದೆ.

**– ಸಂತೋಷ ಎಸ್ ಬಂಡೆ**
**ಶಿಕ್ಷಕರು, ನಾಗಠಾಣ**



ನಟ, ನಿರ್ದೇಶಕ, ನಿರ್ಮಾಪಕರಾಗಿ ಹಲವಾರು ಚಿತ್ರಗಳ ಕೊಡುಗೆ ನೀಡಿರುವ ಅವರು ಕನ್ನಡ ಚಿತ್ರರಂಗಕ್ಕೆ ಕಲಾಸೇವೆ ಸಲ್ಲಿಸಿದ್ದಾರೆ. ಅವರು ಕನ್ನಡ ಜನತೆಗೆ ಜನಪ್ರಿಯ ರಾಜ-ಕುಳ್ಳ ಎಂದೇ ಜನಪ್ರಿಯರು.

ದ್ವಾರಕೀಶ ಅವರು ನಟ-ರಾಗಿ, ಹಾಸ್ಯ ಕಲಾವಿದರಾಗಿ, ಪೋಷಕ ನಟರಾಗಿ ಕನ್ನಡ ಸಿನಿ ಅಭಿಮಾನಿಗಳ ಹೃದಯದಲ್ಲಿ ಕುಳ್ಳನಾಗಿ, ಕಿಟ್ಟಿಯಾಗಿ ವಿಶೇಷ ಸ್ಥಾನ ಗಿಟ್ಟಿಸಿಕೊಂಡಿದ್ದರು. ದಿವಂಗತ ನಟ ವಿಷ್ಣುವರ್ಧನ ಮತ್ತು ದ್ವಾರಕೀಶ ಜೋಡಿ ಕಳ್ಳ-ಕುಳ್ಳ ಎಂದೇ ಪ್ರಸಿದ್ಧವಾಗಿತ್ತು. ಇವರಿಬ್ಬರೂ ಉತ್ತಮ ಸ್ನೇಹಿತರಾಗಿದ್ದು, ದ್ವಾರಕೀಶ-ವಿಷ್ಣು ಅಭಿನಯದ ಬಹುತೇಕ ಚಿತ್ರಗಳಲ್ಲಿ ತೆರೆ ಹಂಚಿಕೊಂಡಿದ್ದರು.


ಜನ್ಮರಹಸ್ಯ, ಮಂಕುತಿಮ್ಮ, ಪೆದ್ದ ಗೆದ್ದ, ಕಿಟ್ಟು ಪುಟ್ಟು,

ಸಿಂಗಾಪುರ'ದ'ಲ್ಲಿ ರಾಜಾಕುಳ್ಳ, ಮನೆ ಮನೆ ಕಥೆ, ಆಫ್ರಿಕಾದಲ್ಲಿ ಶೀಲಾ, ಆಪ್ತಮಿತ್ರ, ಭಲೇ ಹುಡುಗ, ಬಂಗಾರದ ಮನುಷ್ಯ,

ಗಲಾಟೆ ಸಂಸಾರ,ಪ್ರಚಂಡ ಕುಳ್ಳ, ಆಪ್ತಮಿತ್ರ, ಗುರುಶಿಷ್ಯರು,

ಕಳ್ಳ ಕುಳ್ಳ, ಮುದ್ದಿನ ಮಾವ, ರಾಯರು ಬಂದರು ಮಾವನ ಮನೆಗೆ, ಆಟಗಾರ, ಚೌಕ, ಪ್ರೀತಿ ಮಾಡು ತಮಾಷೆ ನೋಡು ಮುಂತಾದ ಚಿತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ, ಕನ್ನಡ ಪ್ರೇಕ್ಷಕರ ಮನಸ್ಸನ್ನು ಗೆದ್ದಿದ್ದಾರೆ. ಅದರಲ್ಲಿಯೂ ಗುರು ಶಿಷ್ಯರು ಚಿತ್ರದಲ್ಲಿ ಇವರ ಅಭಿನಯ ಇಂದಿಗೂ ಕನ್ನಡ ಚಿತ್ರ ರಸಿಕರ ಮನಸ್ಸಿನಲ್ಲಿದ್ದು, ಚಿತ್ರದ ಕೆಲವು ದೃಶ್ಯಗಳನ್ನು ನೆನಪಿಸಿಕೊಂಡು ಬಿದ್ದು ಬಿದ್ದು ನಗುವವರಿದ್ದಾರೆ.

ಏಪ್ರಿಲ್ 26, 1967 ರಂದು ದ್ವಾರಕೀಶ ತಮ್ಮ ಸಂಬಂಧಿಯೇ ಆದ ಅಂಬುಜಾ ಅವರನ್ನು ಮದುವೆಯಾಗಿ ನಾಲ್ಕು ಗಂಡು ಮಕ್ಕಳಿಗೆ ತಂದೆಯಾದರು. ಮೊದಲನೇ ಮಗ ತಂದೆಯೊಂದಿಗೆ ಚಿತ್ರ ನಿರ್ಮಾಣದಲ್ಲಿ ತೊಡಗಿದ್ದರೆ,




ಉಳಿದವರು ಒಂದೆರಡು ಚಿತ್ರಗಳಲ್ಲಿ ತಮ್ಮ ಅದೃಷ್ಟವನ್ನು ಪರೀಕ್ಷಿಸಿ ಈಗ ಬೇರೆ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಕೆಲ ವರ್ಷಗಳ ಹಿಂದೆ ಶೈಲಜಾ ಎಂಬುವರನ್ನೂ ಕೂಡ ಎರಡನೇ ಮದುವೆ ಮಾಡಿಕೊಂಡಿದ್ದರು.

ನಟ ದ್ವಾರಕೀಶ ಅವರು ಕನ್ನಡ ಚಿತ್ರರಂಗದಲ್ಲಿ ಬಹುದೊಡ್ಡ ಹೆಸರು ಮಾಡಿದ್ದಾರೆ. ಹಲವಾರು ವರ್ಷಗಳಿಂದ ಕನ್ನಡ ಚಿತ್ರರಂಗದಲ್ಲಿ ಗಣನೀಯ ಸೇವೆ ಸಲ್ಲಿಸಿದ ಅವರನ್ನು ಪರಿಗಣಿಸಿ ಬೆಂಗಳೂರು ವಿಶ್ವವಿದ್ಯಾನಿಲಯವು ಗೌರವ ಡಾಕ್ಟರೇಟ್ ನೀಡಿದೆ.

ಡಾ.ರಾಜಕುಮಾರ, ವಿಷ್ಣುವರ್ಧನ, ಅಂಬರೀಶ, ಬಾಲಕೃಷ್ಣ, ಅಶ್ವಥ ಸೇರಿದಂತೆ ಕನ್ನಡ ಚಿತ್ರರಂಗದ ದೊಡ್ಡ ದೊಡ್ಡ ಕಲಾವಿದರುಗಳ ಜೊತೆ ಅಭಿನಯಿಸಿದ ಕೀರ್ತಿ ದ್ವಾರಕೀಶ ಅವರಿಗೆ ಸಲ್ಲುತ್ತದೆ.

ಅವರು 16 ಏಪ್ರಿಲ್ 2024 ರಂದು ತಮ್ಮ 81 ನೇ ವಯಸ್ಸಿನಲ್ಲಿ ಹೃದಯಾಘಾತದಿಂದ ಬೆಂಗಳೂ-ರಿನಲ್ಲಿ ನಿಧನರಾದರು. ಅವರು ಇನ್ನು ನೆನಪು ಮಾತ್ರ..

# ಕೊಡೆಕಲ್ಲ ಬಸವೇಶ್ವರ ಜಾತ್ರಾಮಹೋತ್ಸವ ಸಂಪನ್ನ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪಟ್ಟಣದ ಕೊಡೆಕಲ್ ಬಸವೇಶ್ವರ ದೇವಸ್ಥಾನದ ಜಾತ್ರಾಮಹೋತ್ಸವ ಮಂಗಳವಾರ ಸಂಭ್ರಮ, ಸಡಗರದಿಂದ ಜರುಗಿತು. ಜಾತ್ರೆಯಂಗವಾಗಿ ಪಲ್ಲಕ್ಕಿ ಉತ್ಸವವು ಬಸವೇಶ್ವರ ದೇವಸ್ಥಾನದ ಬಸವತೀರ್ಥಕ್ಕೆ ಗಂಗಾಸ್ಥಳಕ್ಕೆ ತೆರಳಿದ ನಂತರ ಬಸವೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿತು. ನಂತರ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಕೊಡೆಕಲ್ ಬಸವೇಶ್ವರ ದೇವಸ್ಥಾನಕ್ಕೆ ಆಗಮಿಸಿತು. ಜಾತ್ರೆಯಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿತು.

ಭಕ್ತರು ಕುಟುಂಬ ಸದಸ್ಯರೊಂದಿಗೆ ದೇವಸ್ಥಾನಕ್ಕೆ ಆಗಮಿಸಿ ದೇವರ ದರ್ಶನ ಪಡೆದುಕೊಂಡರು. ನೈವೇದ್ಯ, ಕಾಯಿ, ಕರ್ಪೂರ ಅರ್ಪಿಸಿ ಭಕ್ತಿಭಾವ ಅನುಭವಿಸಿದರು. ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಪಲ್ಲಕ್ಕಿ ಉತ್ಸವದಲ್ಲಿ ಈರಯ್ಯ ಕೊಡೆಕಲ್ಲಮಠ ಅವರು ಕೊಡೆಕಲ್ಲ ಬಸವೇಶ್ವರ ವಿರಚಿತ ಕಾಲಜ್ಞಾನ ಮಹಾಗ್ರಂಥ ಪಾರಾಯಣ ಮಾಡಿದರು.

ಪಲ್ಲಕ್ಕಿ ಉತ್ಸವದ ಮೆರವಣಿಗೆಯಲ್ಲಿ ಬಸವರಾಜ ಹಾರಿವಾಳ, ಚಂದ್ರಶೇಖರ ಮುರಾಳ, ಶಿವರಾಯ ರಾಯಗೊಂಡ, ಸಂಗು ಮುರಾಳ, ಮುತ್ತು ಹಾರಿವಾಳ, ಸುರೇಶ ಹಾರಿವಾಳ, ಸಂಗಪ್ಪ ರಾಯಗೊಂಡ, ಸುರೇಶ ಬಾಗೇವಾಡಿ, ಗುರಪ್ಪ ಮುರಾಳ, ಸಂಗಪ್ಪ ರಾಯಗೊಂಡ, ಪ್ರಕಾಶ ಮುರಾಳ, ಮಲ್ಲಯ್ಯ ನರಸಲಗಿಮಠ, ಮಹೇಶ ಹಾರಿವಾಳ, ಸೂರಪ್ಪ ಮುರಾಳ,ಸೋಮು ಹಾರಿವಾಳ, ವಿದ್ಯಾ ಮುರಾಳ, ಗೀತಾ ಮುರಾಳ, ಸವಿತಾ ಮುರಾಳ ಇತರರು ಭಾಗವಹಿಸಿದ್ದರು. ಸೋಮವಾರ ರಾತ್ರಿ ಗಂಧ ಏರಿಸುವ ಕಾರ್ಯಕ್ರಮ ಜರುಗಿತು.

# ವಿಶೇಷಚೇತನ ಸ್ನೇಹಿ ಮತಗಟ್ಟೆ ರೂಪಿಸಿ :ಗದ್ಯಾಳ

**ಉದಯರಶ್ಮಿ ನ್ಯೂಸ್**



ಇಂಡಿ: ಲೋಕಸಭೆ ಚುನಾವಣೆಯಲ್ಲಿ ಕ್ಷೇತ್ರವ್ಯಾಪ್ತಿಯ ಮತಗಟ್ಟೆಗಳಲ್ಲಿ ವಿಶೇಷಚೇತನರ ಮತದಾನಕ್ಕೆ ಅಗತ್ಯವಾದ ಮೂಲ ಸೌಕರ್ಯಗಳನ್ನು ಆದ್ಯತೆ ಮೇರೆಗೆ ಕಲ್ಪಿಸುವಂತೆ ಸಹಾಯಕ ಚುನಾವಣೆ ಅಧಿಕಾರಿಗಳು ಮತ್ತು ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಹೇಳಿದರು.

ಪಟ್ಟಣದ ಮಿನಿ ವಿಧಾನಸೌಧದಲ್ಲಿ ವಿಶೇಷಚೇತನರ ಮತದಾರರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ನೋಡಲ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಇಂಡಿ ಮತಕ್ಷೇತ್ರದಲ್ಲಿ 3506 ಕ್ಕೂ ಹೆಚ್ಚು ಮತದಾರರನ್ನು ಗುರುತಿಸಲಾಗಿದ್ದು ಮತಗಟ್ಟೆಗಳಲ್ಲಿ ವಿಶೇಷ ಚೇತನರಿಗೆ ಮತದಾನ ಮಾಡಲು ಅನುಕೂಲ ವಾಗುವಂತೆ ಸೌಲಭ್ಯಗಳನ್ನು ಒದಗಿಸಬೇಕು ಎಂದರು.

ವಿಶೇಷ ಚೇತನರು ಮತದಾರರು ಮತದಾನದಿಂದ ವಂಚಿತರಾಗದಂತೆ ನಿಗಾ ವಹಿಸಬೇಕು, ಇದಕ್ಕಾಗಿ ಪ್ರತಿ ಗ್ರಾ.ಪಂ ವಾರು ಹಾಗೂ ಪ್ರತಿ ಮತಗಟ್ಟೆವಾರು ಎಷ್ಟು ವಿಶೇಷಚೇತನರಿದ್ದಾರೆ ಎಂಬ ಮಾಹಿತಿ ಸಂಗ್ರಹಿಸಿ ಕಾರ್ಯ ತುರ್ತಾಗಿ ಆಗಬೇಕಾಗಿದೆ. ಮತದಾನ ದಿನದಂದು ವಿಶೇಷಚೇತನರಿಗೆ ಮತ ಚಲಾಯಿಸಲು ಯಾವದೇ ಗೊಂದಲಕ್ಕೆ ಆಸ್ಪದವಾಗದಂತೆ ಮತದಾರರ ಚೀಟಿಯನ್ನು ಕ್ಷೇತ್ರ ಮತಗಟ್ಟೆ ಅಧಿಕಾರಿಗಳ ಮೂಲಕ ವಿತರಿಸಲಾಗಿದೆ ಎಂದು ತಿಳಿಸಿದರು.

ವಿಶೇಷಚೇತನರು ಮತದಾನಕ್ಕೆ ಮತಗಟ್ಟೆಗಳಿಗೆ ಆಗಮಿಸಿದಾಗ ಇತರರೊಂದಿಗೆ ಸರತಿ ಸಾಲಿನಲ್ಲಿ ಕಾಯಿಸದೇ ಆದ್ಯತೆ ಮೇರೆಗೆ ಪ್ರತ್ಯೇಕ ವ್ಯವಸ್ಥೆ ಮಾಡಿಕೊಡಬೇಕು. ಮತಗಟ್ಟೆಗಳು ವಿಶೇಷಚೇತನರ ಸ್ನೇಹಿಯಾಗಿರಬೇಕು. ಕುಡಿಯುವ ನೀರು, ನೆರಳಿನ ವ್ಯವಸ್ಥೆ, ಶೌಚಾಲಯ, ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆ, ರ್‍ಯಾಂಪ ವ್ಯವಸ್ಥೆ ಸೇರಿದಂತೆ ಎಲ್ಲಾ ವ್ಯವಸ್ಥೆಗಳು ಸಮರ್ಪಕವಾಗಿರಬೇಕು.

ಸಭೆಯಲ್ಲಿ ತಹಸೀಲ್ದಾರ ಮಂಜುಳಾ ನಾಯಕ, ಇಒ ನೀಲಗಂಗಾ ಬಬಲಾದ ಸೇರಿದಂತೆ ನೋಡಲ್ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಪುರುಷಾರ್ಥ ಮತ್ತು ಭಗವಂತನ ಕೃಪೆ

**ಉದಯರಶ್ಮಿ ದಿನಪತ್ರಿಕೆ**

**ವೀಣಾಂತರಂಗ**



–ವೀಣಾ ಎಚ್. ಪಾಟೀಲ್, ಮುಂಡರಗಿ

ಅದು ರಾಮ ರಾವಣರ ಯುದ್ಧ ಸನ್ನಿಹಿತವಾದ ಕಾಲ. ಸ್ವರ್ಣಲಂಕೆಯನ್ನು ತಲುಪಲು ಬೇಕಾದ ಸೇತುವೆಯ ನಿರ್ಮಾಣ ಕಾರ್ಯ ಭರದಿಂದ ಸಾಗಿತ್ತು. ಎಲ್ಲಾ ಕಪಿಗಳು ಸುತ್ತಮುತ್ತಲ ಗುಡ್ಡ ಬೆಟ್ಟಗಳಿಂದ ಸಣ್ಣ ಕಲ್ಲುಗಳನ್ನು ತಂದು ಸೇತುವೆಯ ನಿರ್ಮಾಣದಲ್ಲಿ ತೊಡಗಿದ್ದವು. ಎಲ್ಲರ ಪ್ರಯತ್ನದ ಫಲವಾಗಿ ಪುಟ್ಟ ಸೇತುವೆ ನಿರ್ಮಾಣವಾಯಿತು.

ಆದರೆ ಪ್ರಭು ಶ್ರೀರಾಮನಿಗೆ ಸೇತುವೆ ಅಷ್ಟೊಂದು ಬಲಿಷ್ಠವಾಗಿಲ್ಲ ಎಂಬ ಭಾವನೆ. ಸೇತುವೆ ತುಂಬಾ ತೆಳುವಾಗಿ ನಿರ್ಮಾಣವಾಗಿದೆ ಎಲ್ಲ ಕಪಿಗಳ ಭಾರಕ್ಕೆ ಬಿದ್ದು ಹೋಗಬಹುದು ಎಂಬ ಭಯ, ಜೊತೆಗೆ

ತನ್ನಿಂದ ಯಾರಿಗೂ ಹಾನಿಯಾಗಬಾರದು ಎಂಬ ಮುಂದಾಲೋಚನೆ ಕೂಡ. ಆದ್ದರಿಂದ ಎಲ್ಲರಿಗಿಂತ ಮುಂಚೆ ತಾನು ಸೇತುವೆಯ ಮೇಲೆ ನಡೆದು ಹೋಗುವ ಪ್ರಯತ್ನದ ಅಂಗವಾಗಿ ಆತ ಹೆಜ್ಜೆ ಇಟ್ಟನು. ಪ್ರಭು ಶ್ರೀ ರಾಮ ಸೇತುವೆಯ ಮೇಲೆ ಕಾಲಿಟ್ಟೊಡನೆ ಸಮುದ್ರದಲ್ಲಿದ್ದ ಎಲ್ಲಾ ಜಲಚರಗಳು ಬಂದು ಸೇತುವೆಯನ್ನು ಗಟ್ಟಿಯಾಗಿ ಒತ್ತಿ ಹಿಡಿದವು. ಎಲ್ಲ ಜಲಚರಗಳ ಪ್ರಯತ್ನದ ಫಲವಾಗಿ ಸೇತುವೆ ಅತ್ಯಂತ ಬಲಿಷ್ಠವಾಯಿತು. ಸೇತುವೆಯ ಮೇಲೆ ನಡೆದಾಡಿದ ಶ್ರೀರಾಮ ತೃಪ್ತನಾಗಿ ಹಿಂದಿರುಗಿ ಬಂದು ಸಮುದ್ರದ ದಡದಲ್ಲಿರುವ ಕಲ್ಲೊಂದರ ಮೇಲೆ ಕುಳಿತನು.

ಇದನ್ನೆಲ್ಲ ಗಮನಿಸುತ್ತಿದ್ದ ಜಾಂಬವಂತ ಕರಡಿ

ಶ್ರೀರಾಮನ ಬಳಿ ಬಂದು "ಪ್ರಭು, ಎಲ್ಲವೂ ನಿನ್ನ ಕೃಪೆಯಿಂದಲೇ ಆಗುತ್ತದೆ ಎಂಬುದು ಇಂದು ಸಾಬೀತಾಯಿತು. ಆದರೆ ನನ್ನದೊಂದು ಸಂದೇಹ" ಎಂದು ಅರಿಕೆ ಮಾಡಿಕೊಂಡನು.

ನಸುನಕ್ಕ ಪ್ರಭು ಶ್ರೀ ರಾಮ "ಹೇಳು ಜಾಂಬವಂತ, ಏನು ನಿನ್ನ ಸಂದೇಹ? ಎಂದು ಕೇಳಲು ಜಾಂಬವಂತನು "ಪ್ರಭು, ನಿನ್ನ ಕೃಪಾ ಕಟಾಕ್ಷದಿಂದಲೇ ಸೇತುವೆ ಬಲವಾಯಿತು ಎಂಬುದಾದರೆ ಇಷ್ಟೆಲ್ಲಾ ಶ್ರಮಪಟ್ಟು ಕಪಿಗಳಿಂದ ಸೇತುವೆಯನ್ನು ನಿರ್ಮಿಸುವ ಸಾಹಸ ಏಕೆ?? ಎಂದು ಪ್ರಶ್ನಿಸಿದನು.

ಪ್ರಭು ಶ್ರೀ ರಾಮನು ಜಾಂಬವಂತನನ್ನು ಉದ್ದೇಶಿಸಿ ಹೀಗೆ ಹೇಳಿದನು "ಜಾಂಬವಂತ, ನಿನ್ನ ಸಂದೇಹ ನನಗೆ ಅರ್ಥವಾಯಿತು. ಎಲ್ಲವನ್ನು ನಾನೇ ಮಾಡಲು ಸಾಧ್ಯವಿರುವಾಗ ಸೇತುವೆ ನಿರ್ಮಾಣ ಮಾಡಲು ಕಪಿಗಳನ್ನು ಏಕೆ ತೊಡಗಿಸಿದೆ ಎಂದಲ್ಲವೇ? ಎಲ್ಲ ಕಪಿಗಳು ಮಾಡಿದ್ದು ತಮ್ಮ ಪುರುಷಾರ್ಥವನ್ನು ಅಂದರೆ ತಮ್ಮ ಕಾರ್ಯವನ್ನು. ಪುರುಷಾರ್ಥ ಎನ್ನುವುದು ಒಂದು ಹಂತದವರೆಗೆ ಮಾತ್ರ ಸಾಧ್ಯವಾಗುತ್ತದೆ. ಅದಕ್ಕೆ ನನ್ನ ಕೊಡುಗೆ ಕೇವಲ ಕೃಪೆ. ಕೃಪೆ ಸೀಮಾತೀತವಾದದ್ದು. ಅಸೀಮವಾದದ್ದು. ಅನಂತವಾದದ್ದು.ಪುರುಷಾರ್ಥದೊಂದಿಗೆ ಕೃಪೆಯು ಬೆರೆತಾಗ ಸಾರ್ಥಕ ಕಾರ್ಯವಾಗುತ್ತದೆ. ಅಂತೆಯೇ ಇಂದು ಕಪಿಗಳ ಪುರುಷಾರ್ಥಕ್ಕೆ ನನ್ನ ಕೃಪೆಯು ಸೇರಿ ಈ ಸೇತುವೆ ನಿರ್ಮಾಣವಾಗಿದೆ ಎಂದು ಹೇಳಿದನು.

ಅದೆಷ್ಟು ಸುಂದರವಾದ ಮಾತಲ್ಲವೇ ಸ್ನೇಹಿತರೆ!? ಎಲ್ಲವೂ ದೇವರ ಕೃಪೆ ಎಲ್ಲವನ್ನು ದೇವರೇ ಮಾಡುತ್ತಾನೆ ಎಂದು ಹೇಳಿ ನಾವು ಸುಮ್ಮನೆ ಕುಳಿತುಕೊಂಡರೆ ಕಾರ್ಯಸಿದ್ಧಿ ಆಗದು. ದೇವರು ಹೇಗಾದ್ರೂ ಪಾಸ್ ಮಾಡುತ್ತಾನೆ ಎಂದು ಪರೀಕ್ಷೆಗೆ

ಓದದಿದ್ದರೆ ಪಾಸಾಗಲು ಸಾಧ್ಯವೇ?? ಹುಟ್ಟಿಸಿದ ದೇವರು ಹುಲ್ಲು ಮೇಯಿಸಲಾರ ಎಂಬ ಮಾತೇನೋ ನಿಜ ಆದರೆ ಆ ಆಹಾರವನ್ನು ಹುಡುಕಿ ಹೊರಡುವ ಪುರುಷಾರ್ಥ ಪ್ರಯತ್ನ ನಮ್ಮದಲ್ಲವೇ?



ಇದಕ್ಕೆ ಪೂರಕವಾಗಿ ಇನ್ನೊಂದು ಕಥೆ ನೆನಪಿಗೆ ಬರುತ್ತದೆ. ದೇವರ ಮೇಲೆ ಅಪಾರ ಭಕ್ತಿಯುಳ್ಳ ಓರ್ವ ವ್ಯಕ್ತಿ ತನ್ನ ಊರಿಗೆ ನೆರೆ ಬಂದಾಗ ದೇವರನ್ನು ಕಾಪಾಡು ಎಂದು ಬೇಡಿಕೊಂಡನು. ದೇವರೇ ಬಂದು ತನ್ನನ್ನು ಕಾಪಾಡುತ್ತಾನೆ ಎಂಬ ನಂಬಿಕೆ ಆತನದ್ದು. ಊರಿನವರೆಲ್ಲ ಆತನನ್ನು ದೋಣಿಯಲ್ಲಿ ಸುರಕ್ಷಿತ ಸ್ಥಳಕ್ಕೆ ಕರೆದೊಯ್ಯಲು ಪ್ರಯತ್ನಿಸಿದರಾದರೂ ಆತ ಒಪ್ಪಲಿಲ್ಲ. ಆತನನ್ನು ಬಿಟ್ಟು ಅವರು ಹೊರಟು ಹೋದರು. ಕೆಲ ಸಮಯದ ನಂತರ ಮತ್ತೊಂದು ದೋಣಿಯಲ್ಲಿರುವ ಜನರು ಕೂಡ ಆತನನ್ನು ಬೇಗ ಬರುವಂತೆ ಕರೆದರೂ ಕೂಡ ಆತ



"ಇಲ್ಲ ಇಲ್ಲ, ದೇವರೇ ಬಂದು ನನ್ನನ್ನು ರಕ್ಷಿಸುತ್ತಾನೆ ಎಂದು ಹೇಳಿದನು. ಅವರು ಕೂಡ ಆತನನ್ನು ಬಿಟ್ಟು ಹೊರಟೆ ಹೋದರು. ನೀರಿನ ಪ್ರವಾಹ ಏರುತ್ತಲೇ ಹೋಯಿತು ಮತ್ತೂ ಕೆಲ ಗಂಟೆಗಳ ನಂತರ ದೊಡ್ಡ ಮರದ ದಿಮ್ಮಿಯೊಂದು ಆತ ಕುಳಿತ ಕಟ್ಟಡದ ಬಳಿ ತೇಲುತ್ತಾ ಬಂದಿತ್ತು. ಅದರ ಮೇಲೆ ಆತ ಕುಳಿತರೆ ಇಲ್ಲವೇ ಅದನ್ನು ಹಿಡಿದುಕೊಂಡರೆ ಆತ ಮುಳುಗದೆ ಸುರಕ್ಷಿತ ದಡಕ್ಕೆ ಹೋಗಿ ಸೇರುವ ಸಾಧ್ಯತೆ ಇತ್ತು. ಆದರೂ ಕೂಡ ದೇವರು ಬರುತ್ತಾನೆ ಎಂಬ ನಿರೀಕ್ಷೆಯಲ್ಲಿ ಆತ ಹೋಗಲೇ ಇಲ್ಲ.

ಅಂತಿಮವಾಗಿ ನೆರೆಯ ಪ್ರವಾಹದಲ್ಲಿ ಕೊಚ್ಚಿ ಹೋದ ಆತ ಮರಣ ಹೊಂದಿದ.

ಮರಣದ ನಂತರ ಆತನ ಆತ್ಮ ದೇವಲೋಕಕ್ಕೆ ಬಂದಾಗ ಅಲ್ಲಿ ತನ್ನ ಇಷ್ಟದೈವವನ್ನು ಕಂಡ ಆ ವ್ಯಕ್ತಿ "ಇದೇನು ದೇವ, ನಾನು ನಿನ್ನನ್ನು ನಂಬಿದರೆ ನೀನು ನನ್ನ ಕೈ ಹಿಡಿದು ಕಾಪಾಡಲಿಲ್ಲ.!? ಎಂದು ದೂರಿದನು. ಆಗ ದೇವರು ನಸುನಗುತ್ತಾ "ಮಗು, ನಾನು ನಿನ್ನನ್ನು ಕಾಪಾಡಲೆಂದೆ ಎರಡು ಬಾರಿ ದೋಣಿಯಲ್ಲಿ ಜನರನ್ನು ಕಳುಹಿಸಿದೆ, ಮೂರನೇ ಬಾರಿ ಮರದ ದಿಮ್ಮಿಯ ರೂಪದಲ್ಲಿ ನಿನ್ನ ಬಳಿ ಬಂದೆ ಆದರೆ ನೀನು ಬರಲಿಲ್ಲ. ನಿನ್ನ ಸ್ವ ಪ್ರಯತ್ನ ಇಲ್ಲದೆ ಹೋದರೆ ನಾನೇನು ಮಾಡಿದರು ಅದು ವಿಫಲವೇ ಆಗುತ್ತದೆ ಎಂಬುದು ನಿನಗೆ ಅರಿವಾಗಲೇ ಇಲ್ಲ ಎಂದು ಹೇಳಿದನು. ಇದೀಗ ಆ ವ್ಯಕ್ತಿಗೆ ತನ್ನ ತಪ್ಪಿನ ಅರಿವಾಯಿತು. ಯಾವುದೇ ರೂಪದಲ್ಲಿ ಆದರೂ ದೇವರು ನಮ್ಮನ್ನು ಕಾಪಾಡಬಹುದು ನಿಜ ಆದರೆ ಇಲ್ಲಿ ನಮ್ಮ ಪುರುಷಪ್ರಯತ್ನವೂ ಅಷ್ಟೇ ಮುಖ್ಯ ಎಂಬುದನ್ನು ಆತ ಅರಿತುಕೊಂಡದ್ದೇನೋ ನಿಜ ಆದರೆ ಕಾಲ ಮೀರಿ ಹೋಗಿತ್ತು.


ಸ್ನೇಹಿತರೆ, ಇಲ್ಲಿ ನಾವು ಅರಿತುಕೊಳ್ಳಬೇಕಾಗಿರುವುದು ಎರಡು ವಿಷಯಗಳನ್ನು.

ಒಂದು, ಸ್ವ ಪ್ರಯತ್ನದಿಂದ ಪುರುಷಾರ್ಥ ಸಾಧನೆ. ಎರಡನೆಯದಾಗಿ, ಭಗವಂತನ ಕೃಪೆ ನಮ್ಮ ಮೇಲಾಗುವುದು ನಮ್ಮ ಕಾರ್ಯನಿರ್ವಹಣೆಯ ಬಲದಿಂದಲೇ ಹೊರತು ಕೇವಲ ಮೊರೆ ಇಡುವುದರಿಂದ ಅಲ್ಲ ಎಂದು. ದೇವರು ಕೂಡ ನಮ್ಮ ಮೊರೆಯನ್ನು ಆಲಿಸುವುದು ನಾವು ಆತನನ್ನು ನಂಬುವುದರ ಜೊತೆ ಜೊತೆಗೆ ಶ್ರದ್ಧೆಯಿಂದ ಕಾರ್ಯ ತತ್ಪರರಾದಾಗ ಮಾತ್ರ ಎಂಬುದನ್ನು ಅರಿತು ಬದುಕಿನಲ್ಲಿ ಉತ್ತಮ ಕಾರ್ಯಗಳನ್ನು ಮಾಡುತ್ತಾ ಹೋಗೋಣ.

# ಶ್ರೀರಾಮನವಮಿ

**ಉದಯರಶ್ಮಿ ದಿನಪತ್ರಿಕೆ**

**ಇಂದು ಶ್ರೀರಾಮನವಮಿ ಪ್ರಯುಕ್ತ ವಿಶೇಷ ಲೇಖನ**



– ಮಂಡ್ಯ.ಮ.ನಾ.ಉಡುಪ

ಮಹಾವಿಷ್ಣುವಿನ ಏಳನೆಯ ಅವತಾರವಾದ ಶ್ರೀರಾಮನು ಜನಿಸಿದ ನವಮಿ ದಿನ ಶ್ರೀ ರಾಮ ನವಮಿ ಹಬ್ಬ ಆಚರಿಸಲಾಗುತ್ತದೆ. . ಹಿಂದೂ ಧರ್ಮದಲ್ಲಿ ಶ್ರೀ ರಾಮ ನವಮಿ ಎಂದರೆ ಹಬ್ಬದ ಸಂಭ್ರಮ ಚೈತ್ರ ಮಾಸದ ಒಂಭತ್ತನೇ ದಿನ, ಅಂದರೆ ವರ್ಷದ ಮೊದಲ ತಿಂಗಳಿನಲ್ಲಿ ಬರುವ ಹಬ್ಬ .

ಧರ್ಮ ಶಾಸ್ತ್ರಗಳ ಪ್ರಕಾರ ಅಯೋಧ್ಯೆಯ ರಾಜನಾದ ದಶರಥನಿಗೆ ಕೌಸಲ್ಯಾ, ಕೈಕೇಯೀ ಹಾಗೂ ಸುಮಿತ್ರೆ ಎಂಬ ಮೂರು ಜನ ಪತ್ನಿಯರಿದ್ದರು. ಆದರೆ ಯಾರಿಗೂ ಪುತ್ರ ಸಂತಾನವಾಗಿರಲಿಲ್ಲ. ನಂತರ ದಶರಥನು ಋಷಿಮುನಿಗಳ ಸಲಹೆಯಂತೆ ಪುತ್ರಕಾಮೇಷ್ಠಿ ಯಾಗವನ್ನು ಮಾಡಿಸಿದ. ಈ



ಯಜ್ಞದಿಂದ ಸಂತುಷ್ಟನಾದ ಪ್ರಜಾಪತಿಯು ದಶರಥನಿಗೆ ದಿವ್ಯಪಾಯಸವನ್ನು ನೀಡುತ್ತಾನೆ. ಈ ದಿವ್ಯ ಪಾಯಸವನ್ನು ದಶರಥನು ತನ್ನ ಮೂವರು ಪತ್ನಿಯರಿಗೂ ಹಂಚುತ್ತಾನೆ. ಇದರಂತೆ ಚೈತ್ರ ಮಾಸದ ಶುಕ್ಲಪಕ್ಷದ ನವಮಿ ತಿಥಿಯಂದು ಮಧ್ಯಾಹ್ನ ಪುನರ್ವಸು ನಕ್ಷತ್ರದಲ್ಲಿ ಕೌಸಲ್ಯೆಗೆ ರಾಮನೂ, ಪುಷ್ಯನಕ್ಷತ್ರದ ದಶಮಿಯಂದು ಸೂರ್ಯೋದಯಕ್ಕೆ ಮುನ್ನ ಕೈಕೇಯಿಗೆ ಭರತನೂ, ಅದೇ ದಿನ ಆಶ್ಲೇಷಾ ನಕ್ಷತ್ರದಲ್ಲಿ ಮಧ್ಯಾಹ್ನ ಲಕ್ಷ್ಮಣ, ಶತ್ರುಘ್ನರೂ ಜನಿಸುತ್ತಾರೆ. ಹೀಗೆ ರಾಮನು ಜನಿಸಿದ ನವಮಿಯಂದು ರಾಮನವಮಿಯನ್ನಾಗಿ ಆಚರಿಸುತ್ತಾರೆ.

ಶ್ರೀ ರಾಮ ನವಮಿಯ ಮಹತ್ವ

ಶ್ರೀ ರಾಮನು ಜನಿಸಿದ ದಿನವೆಂದು ಆಚರಿಸಲಾಗುವ ಹಬ್ಬ ರಾಮನವಮಿ. ಅಯೋಧ್ಯೆಯ ರಾಜ ದಶರಥ ಹಾಗೂ ಕೌಸಲ್ಯೆಯ ಪುತ್ರನಾಗಿ ಮಹಾವಿಷ್ಣುವಿನ ಏಳನೇ ಅವತಾರವಾಗಿ ಶ್ರೀರಾಮನು ಜನಿಸುತ್ತಾನೆ. ಹಿಂದೂ ಗ್ರಂಥಗಳಲ್ಲಿ ಉಲ್ಲೇಖವಿರುವಂತೆ ನಾಲ್ಕು ಯುಗಗಳಲ್ಲಿ ಒಂದಾದ ತ್ರೇತಾಯುಗದಲ್ಲಿ ರಾಮನು ಜನಿಸಿದನು. ಈ ದಿನ ಶ್ರೀರಾಮನನ್ನು ಪೂಜಿಸಿದರೆ ಕೆಟ್ಟ ಶಕ್ತಿಗಳು ನಿವಾರಣೆಯಾಗಿ, ಭೂಮಿಯ ಮೇಲೆ ದೈವೀಕ ಶಕ್ತಿಯು ನೆಲೆಸುತ್ತದೆ.

ಧಾರ್ಮಿಕ ನಂಬಿಕೆಯ ಪ್ರಕಾರ ದೇವತೆಗಳು ಹಾಗೂ ದೇವರುಗಳು ಅವತಾರ ತಾಳಿದ ದಿನದಂದು ಭೂಮಿಯ ಮೇಲೆ ಅವರ ದೈವೀ ತತ್ವ, ಮಹತ್ವಗಳು ಹೆಚ್ಚಿನ ಪ್ರಮಾಣದಲ್ಲಿ ಕಾರ್ಯನಿರತವಾಗಿರುತ್ತದೆ. ಶ್ರೀ ರಾಮ ನವಮಿಯಂದು ಶ್ರೀ ರಾಮ ತತ್ವವು ಎಂದಿಗಿಂತಲೂ ಸಾವಿರ ಪಟ್ಟು ಹೆಚ್ಚು ಭೂಮಿಯಲ್ಲಿ ಕಾರ್ಯನಿರತವಾಗಿರುತ್ತದೆ. ಹೀಗಾಗಿ ಈ ದಿನ ರಾಮ ನಾಮ ಜಪ, ಶ್ರೀ ರಾಮನ ಉಪಾಸನೆಗಳನ್ನು ಮಾಡುವುದರಿಂದ ಬಹಳ ಪ್ರಯೋಜನ ಪಡೆಯಬಹುದೆಂದು ಹೇಳಲಾಗುತ್ತದೆ.

ರಾಮ ನವಮಿಯ ಆಧ್ಯಾತ್ಮಿಕ ಮಹತ್ವ

ರಾಮ: ಎನ್ನುವ ಎರಡು ಅಕ್ಷರದಲ್ಲಿ ಮಹತ್ವಪೂರ್ಣವಾದ ಅರ್ಥವಿದೆ 'ರಾ' ಎಂದರೆ ಬೆಳಕು 'ಮ' ಎಂದರೆ ಒಳಗೆ. ಅಂದರೆ ನಿಮ್ಮೊಳಗಿನ ದೈವಿಕ ಬೆಳಕು ರಾಮ.


ದಶರಥ: ಶ್ರೀರಾಮನ ತಂದೆ ದಶರಥ 'ದಶ' ಎಂದರೆ ಹತ್ತು, 'ರಥ' ಎಂದರೆ ರಥ. ಹತ್ತು ರಥಗಳು ಎಂದರೆ ಐದು ಕಾರ್ಯ ಇಂದ್ರಿಯಗಳು. ಇದನ್ನು ಕರ್ಮೇಂದ್ರಿಯಗಳು ಎಂದೂ ಕರೆಯುತ್ತಾರೆ. ಇದರಲ್ಲಿ ಮಾತನಾಡುವ ಸಾಮರ್ಥ್ಯ, ಕೈಗಳು, ಕಾಲುಗಳು, ಚಲಿಸುವ ಭಾಗಗಳು ಹಾಗೂ ಜನನಾಂಗಗಳು ಸೇರಿವೆ. ಉಳಿದವು ಐದು ಜ್ಞಾನೇಂದ್ರಿಗಳು ಇದರಲ್ಲಿ ಕಣ್ಣು, ಕಿವಿ, ಮೂಗು, ನಾಲಿಗೆ ಮತ್ತು ಸ್ಪರ್ಶ ಪ್ರಜ್ಞೆ ಸೇರಿದೆ.

ಕೌಸಲ್ಯಾ: ಕೌಸಲ್ಯೆ ರಾಮನ ತಾಯಿ. ಕೌಸಲ್ಯಾ ಹೆಸರಿನ ಅರ್ಥ 'ಕೌಶಲ್ಯ'. ಒಬ್ಬ ನುರಿತ ಸಾರಥಿ ಹತ್ತು ರಥಗಳ ಸವಾರಿ ಮಾಡುತ್ತಾನೆ. ಇಂತಹ ಶಕ್ತಿಯು ರಾಮನಲ್ಲಿದೆ.

ಅಯೋಧ್ಯೆ: ಶ್ರೀ ರಾಮ ಜನಿಸಿದ ಸ್ಥಳ. 'ಯೋಧ್ಯಾ' ಎಂದರೆ ಯುದ್ಧ, 'ಅ' ಎಂದರೆ ಯುದ್ಧದ ಋಣಾತ್ಮಕ ಪೂರ್ವಪ್ರತ್ಯಯ. ಅಂದರೆ ಯುದ್ಧವಿಲ್ಲದ, ಸಮೃದ್ಧಿ ಹಾಗೂ ನ್ಯಾಯಯುತವಾಗಿರುವ ಸ್ಥಳವನ್ನು ಅಯೋಧ್ಯೆ ಎಂದು ಕರೆಯುತ್ತಾರೆ.

ಶ್ರೀ ರಾಮನ ಕುರಿತಾಗಿರುವ ಅಚ್ಚರಿಯ ಸಂಗತಿಗಳು ಏನು ಗೊತ್ತಾ?

ನಮ್ಮೊಳಗಿರುವ ಶ್ರೀ ರಾಮ: ಸತ್ಯಯುಗದಲ್ಲಿ ವಿವಿಧ ಗ್ರಹಗಳ ದೇವರು ಹಾಗೂ ರಾಕ್ಷಸರ ಮಧ್ಯೆ ಯುದ್ಧ ನಡೆದವು. ತ್ರೇತಾಯುಗದಲ್ಲಿ



ಒಂದೇ ಗ್ರಹದಲ್ಲಿ ವಾಸಿಸುತ್ತಿದ್ದ ದೇವರು ಮತ್ತು ಅಸುರರ ಮಧ್ಯೆ ಯುದ್ಧ ನಡೆದವು. ಅಂದರೆ ಅಯೋಧ್ಯೆಯಿಂದ ರಾಮ ಹಾಗೂ ಲಂಕೆಯ ರಾವಣನ ಮಧ್ಯೆ ಯುದ್ಧ ನಡೆಯಿತು. ದ್ವಾಪರ ಯುಗದಲ್ಲಿ ಒಂದೇ ಕುಟುಂಬದಲ್ಲಿರುವ ಜನರ ಮಧ್ಯೆ ಯುದ್ಧಗಳು ನಡೆದವು. ಅಂದರೆ ಪಾಂಡವರು ಮತ್ತು ಕೌರವರ ಮಧ್ಯೆ. ಕಲಿಯುಗದಲ್ಲಿ ಯುದ್ಧಗಳು ನಮ್ಮೊಳಗೇ ನಡೆಯುತ್ತಿವೆ!

ರಾಮನು ನಮ್ಮ ಆತ್ಮವಾದರೆ, ಸೀತೆಯು ನಮ್ಮ ಮನಸ್ಸು, ಹನುಮಾನ್ ನಮ್ಮ ಜೀವಶಕ್ತಿಯಾದರೆ ರಾವಣನು ನಮ್ಮ ಅಹಂ. ಅಹಂ ಮನಸ್ಸನ್ನು ಆವರಿಸಿಕೊಂಡಾಗ ನಮ್ಮ ಆತ್ಮವು ಪ್ರಕ್ಷುಬ್ಧಗೊಳ್ಳುತ್ತದೆ. ಮನಸ್ಸು ಮತ್ತು ಆತ್ಮವನ್ನು ಸಮನತ್ವಯಗೊಳಿಸಲು ಧ್ಯಾನ ಮಾಡಿ, ಉಸಿರಾಟದ ಮೂಲಕ ನಮ್ಮ ಮನಸ್ಸು ಮತ್ತು ಆತ್ಮವನ್ನು ನಿಯಂತ್ರಿಸಬಹುದು. ರಾಮ ಮತ್ತು ಸೀತೆ ಒಂದಾದರೆ ಅಹಂ ನಾಶವಾಗುತ್ತದೆ.

ರಾಮ ನವಮಿ ಆಚರಣೆ ಅಂದರೆ ಉಪವಾಸ ಮಾಡುತ್ತಾ ಶ್ರೀರಾಮ ಜಪ, ರಾಮಾಯಣ ಪಾರಾಯಣ, ಕಲ್ಯಾಣ್ಯೋತ್ಸವ ಮಾಡಬೇಕು:

ಅನೇಕ ಕಡೆಗಳಲ್ಲಿ ಚೈತ್ರ ಮಾಸದ ಪ್ರತಿಪಾದದಿಂದ ಒಂಬತ್ತು ದಿನಗಳವರೆಗೆ ರಾಮ ನವಮಿ ಉತ್ಸವವು ನಡೆಯುತ್ತದೆ. ರಾಮ ನವಮಿಯಂದು ಶ್ರೀ ರಾಮನನ್ನು ಪೂಜಿಸಿ, ಅರ್ಚಿಸಲಾಗುತ್ತದೆ. ಈ ದಿನದಂದು ಉಪವಾಸವನ್ನು ಮಾಡಿದರೆ ಅತ್ಯಂತ ಶ್ರೇಷ್ಠ. ರಾಮ ನವಮಿಯಂದು ಬೆಳಗ್ಗೆಯಿಂದ ಮರುದಿನ ಬೆಳಗ್ಗೆಯವರೆಗೂ ಉಪವಾಸವನ್ನು ಕೈಗೊಳ್ಳಬೇಕು. ಈ ಸಮಯದಲ್ಲಿ ಶ್ರೀರಾಮ ಜಪ, ರಾಮಾಯಣ ಪಾರಾಯಣ, ಶ್ರೀ ರಾಮ ಸೀತಾ ಕಲ್ಯಾಣ್ಯೋತ್ಸವವನ್ನೂ ಮಾಡಬಹುದು.

ಕೆಲವೆಡೆ ಪ್ರತಿಪಾದದಿಂದ ನವಮಿಯವರೆಗೂ ಒಂಬತ್ತು ದಿನಗಳಲ್ಲಿ ಭಜನೆ ಹಾಗೂ ಕೀರ್ತನೆಗಳನ್ನು ಆಯೋಜಿಸುತ್ತಾರೆ. ಈ ದಿನ ಕೆಲವು ಭಕ್ತರು ಕಟ್ಟುನಿಟ್ಟಾದ ಉಪವಾಸ ವ್ರತವನ್ನು ಆಚರಿಸುತ್ತಾರೆ ಮತ್ತು ನಿರಾಹಾರ ಉಪವಾಸವನ್ನೂ ಮಾಡುವವರಿದ್ದಾರೆ. ಕೆಲವರು ಸೌಮ್ಯವಾದ ಉಪವಾಸವನ್ನು ಆಚರಿಸಿ, ನೀರು ಹಾಗೂ ಹಣ್ಣುಗಳನ್ನು ಸೇವಿಸುತ್ತಾರೆ. ರಾಮನವಮಿಯಂದು ಶ್ರೀರಾಮನ ಜನ್ಮಸ್ಥಳವಾದ ಅಯೋಧ್ಯೆಗೆ ಭೇಟಿ ನೀಡಿ ಸರಯೂ ನದಿಯಲ್ಲಿ ಮಿಂದು ಶ್ರೀರಾಮನ ದರ್ಶನ ಮಾಡಿ ಪಾವನರಾಗುತ್ತಾರೆ.

ಧರ್ಮವನ್ನು ರಕ್ಷಿಸಲು ಮತ್ತು ಉತ್ತಮ ನಡತೆಯ ಮಾದರಿಯನ್ನು ಹೊಂದಿಸಲು ಅವರು ತಮ್ಮ ಇಡೀ ಜೀವನವನ್ನು ಪಣಕ್ಕಿಟ್ಟರು. ಅವರು ತಮ್ಮನ್ನು ತಾವು ಆದರ್ಶ ಪುರುಷ ಎಂದು ಜೀವನದುದ್ದಕ್ಕೂ ನೋಡಿಕೊಂಡರು. ಈ ಕಾರಣದಿಂದ ಅವನನ್ನು ಮರ್ಯಾದಾ ಪುರುಷೋತ್ತಮ ಶ್ರೀರಾಮ ಎಂದು ಕರೆಯುತ್ತಾರೆ. ಕಷ್ಟಕಾಲದಲ್ಲಿಯೂ ಶ್ರೀರಾಮನು ಧರ್ಮ ಮಾರ್ಗವನ್ನು ಅರ್ಧಕ್ಕೆ ಬಿಡದೆ ಸಮಾಜದ ಮುಂದೆ ತಾನೊಬ್ಬ ಪರಿಪೂರ್ಣ ವ್ಯಕ್ತಿ ಎಂದು ಸಾಬೀತುಪಡಿಸಿದನು.

ರಾಮ ನವಮಿಯ ಪೂಜೆ ವಿಧಾನ:

ರಾಮ ನವಮಿಯ ದಿನ ಬ್ರಹ್ಮಪ್ರತಿಜ್ಞೆಗಳು ಮುಹೂರ್ತದಲ್ಲಿ ಎದ್ದು, ಸ್ನಾನ ಮಾಡಿದ ನಂತರ ಶುಭ್ರವಾದ ಹಳದಿ ಬಣ್ಣದ ಬಟ್ಟೆಯನ್ನು ಧರಿಸಿ ಉಪವಾಸದ ಪ್ರತಿಜ್ಞೆ ಮಾಡಿ. ಇದರೊಂದಿಗೆ ಗಂಗಾಜಲವನ್ನು ಸಿಂಪಡಿಸಿ ಪೂಜಾ ಸ್ಥಳವನ್ನು ಸ್ವಚ್ಛಗೊಳಿಸಿ.



ರಾಮನ ಪೂಜೆಯಲ್ಲಿ ತುಳಸಿ ಪತ್ರೆಗಳು ಮತ್ತು ಕಮಲದ ಹೂವು ಕಡ್ಡಾಯವಾಗಿರಬೇಕೆಂಬುದನ್ನು ಗಮನದಲ್ಲಿಟ್ಟುಕೊಳ್ಳಿ.

ಮರದ ಪೀಠವನ್ನು ತೆಗೆದುಕೊಂಡು, ಅದರ ಮೇಲೆ ಕೆಂಪು ಬಟ್ಟೆಯನ್ನು ಹರಡಿ ಮತ್ತು ಅದರ ಮೇಲೆ ರಾಮನು ಸಿಂಹಾಸನದ ಮೇಲೆ ಕುಳಿತಿರುವ ಚಿತ್ರವನ್ನು ಅಥವಾ ವಿಗ್ರಹವನ್ನು ಸ್ಥಾಪಿಸಿ.

ಇದರ ನಂತರ ಗಂಗಾಜಲವನ್ನು ಸಿಂಪಡಿಸಿ ಮತ್ತು ಅಕ್ಕಿಯಿಂದ ಅಷ್ಟ ದಳವನ್ನು ಮಾಡಿ. ಅಷ್ಟ ದಳದ ಮೇಲೆ ತಾಮ್ರದ ಕಲಶವನ್ನು ಇಟ್ಟು ನಾಲ್ಕು ಮುಖದ ದೀಪವನ್ನು ಬೆಳಗಿಸಿ.

ಬೇಕಿದ್ದರೆ ತೊಟ್ಟಿಲಿನಲ್ಲಿ ಬಾಲ ರಾಮನ ಅಥವಾ ರಾಮ ಲೀಲೆಯ ವಿಗ್ರಹವನ್ನು ಇಟ್ಟು ತೂಗಿ, ನಂತರ ರಾಮನಿಗೆ ಆರತಿಯನ್ನು ಮಾಡಬೇಕು ಅಥವಾ ವಿಷ್ಣು ಸಹಸ್ರನಾಮ ಪಠಿಸಬಹುದು. ಇದರ ನಂತರ ಪಾಯಸ, ಹಣ್ಣುಗಳು ಮತ್ತು ಸಿಹಿ ತಿಂಡಿಗಳನ್ನು ಅರ್ಪಿಸಿ.

ಈ ದಿನ ನೀವು ರಾಮನ ಭಕ್ತಿಯಲ್ಲಿ ಮುಳುಗಿ ಕೀರ್ತನೆಯನ್ನು ಹಾಡಬಹುದು. ಹಾಗೂ ಈ ದಿನ ರಾಮಚರಿತ ಮಾನಸ ಮತ್ತು ರಾಮ ಸ್ತೋತ್ರವನ್ನು ಸಹ ಪಠಿಸಬಹುದು. ಇದರೊಂದಿಗೆ ಸಂಜೆ ರಾಮನಿಗೆ ಸಂಬಂಧಿಸಿದ ಕಥೆಯನ್ನು ಕೂಡ ಕೇಳಿ.

ರಾಮನವಮಿ ಉಪವಾಸವನ್ನು ಆಚರಿಸುವುದರಿಂದ ಸಂತೋಷ, ಸಮೃದ್ಧಿ ಮತ್ತು ಶಾಂತಿಯನ್ನು ಪಡೆದುಕೊಳ್ಳಬಹುದು. ಅಷ್ಟು ಮಾತ್ರವಲ್ಲ, ಇದು ಶ್ರೀರಾಮನ ಆಶೀರ್ವಾದವನ್ನು ಪಡೆದುಕೊಳ್ಳಲು ಕೂಡ ಹೆಚ್ಚು ಸಹಕಾರಿಯಾಗಿದೆ.

ರಾಮ ನವಮಿಯಂದು ಈ ಮೇಲಿನಂತೆ ರಾಮನನ್ನು ಪೂಜಿಸುವುದರಿಂದ ಅಥವಾ ರಾಮ ನವಮಿ ವ್ರತವನ್ನು ಆಚರಿಸುವುದರಿಂದ ಭಗವಾನ್ ರಾಮನ ಆಶೀರ್ವಾದವನ್ನು ಪಡೆದುಕೊಳ್ಳಬಹುದು. ರಾಮ ನವಮಿ ದಿನದಂದು ಶುಭ ಮುಹೂರ್ತದಲ್ಲಿ ರಾಮನನ್ನು ಪೂಜಿಸಿದರೆ ಪೂಜೆಯ ಫಲ ಮತ್ತಷ್ಟು ಹೆಚ್ಚಾಗುತ್ತದೆ ಎನ್ನುವುದು ವಾಡಿಕೆ.

# ಕಾಂಗ್ರೆಸ್ ಅಭ್ಯರ್ಥಿ ಜಿ.ಕುಮಾರ್ ನಾಯಕ್ ಮತಯಾಚನೆ

**ಉದಯರಶ್ಮಿ ನ್ಯೂಸ್**

ಕೆಂಭಾವಿ: ಪಟ್ಟಣದ ಮಹಾ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ ರಾಯಚೂರು ಲೋಕಸಭೆಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಜಿ ಕುಮಾರ್ ನಾಯಕ ಚುನಾವಣೆ ಪ್ರಚಾರದ ಅಂಗವಾಗಿ ಮಂಗಳವಾರ ಶಹಾಪುರ ವಿಧಾನಸಭಾ ಕ್ಷೇತ್ರದ ಕೆಂಭಾವಿ ಬ್ಲಾಕ್ ಕಾಂಗ್ರೆಸ್ ಸಮಿತಿಯ ಕಾರ್ಯಕರ್ತರ ಸಭೆಯಲ್ಲಿ ಸಣ್ಣ ಕೈಗಾರಿಕೆ ಸಚಿವ ಹಾಗೂ



ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ಗೌಡ ದರ್ಶನಾಪುರ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಜಿ ಕುಮಾರ್ ನಾಯಕ ಹಾಗೂ ಕೆಂಬಾವಿ ಬ್ಲಾಕ್ ಕಾಂಗ್ರೆಸ್ ಪಕ್ಷದ ಮುಖಂಡ ಸಿದ್ದನಗೌಡ ಪೊಲೀಸ್ ಪಾಟೀಲ್, ನಿಂಗನಗೌಡ ಮಾಲಿಪಾಟೀಲ್, ಶರಣಬಸವ ಡಿಗ್ಗಾವಿ, ವೈಪಾಲ್ ರೆಡ್ಡಿ ಸಾಹುಕಾರ ಡಿಗ್ಗಾವಿ, ವಾಮನರಾವ್ ದೇಶಪಾಂಡೆ, ಕಾಜಾ ಪಟೇಲ್ ಕಾಚೂರ್, ಆರಿಫ್ ಹುಸೇನ್ ಖಾಜಿ, ರಂಗಪ್ಪ ವಡ್ಡರ್, ದೇವು ಮ್ಯಾಗೇರಿ, ಸಾಹಿಬುಲಾಲ ಅಂ–ದೇಹಲಿ, ಶಂಕರ್ ಖಾನಾಪುರ್, ಮೈನುದ್ದಿನ್ ಸಾಸನೂರ್, ಅಜಿಜ್ ಪಾಶ ಖಾಜಿ, ಇಸ್ಮೈಲ್ ಜಮಾದಾರ, ತಿಪ್ಪಣ್ಣ ಯಾಳಗಿ, ಪರಶುರಾಮ ಬಳಬಟ್ಟಿ ಮತ್ತು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

# ಅಂಬೇಡ್ಕರ್ ದೇಶದ ಮಹಾನ್ ನಾಯಕ :ಯಳಸಂಗಿ

**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಡಾ. ಅಂಬೇಡ್ಕರ್ ಮತ್ತೆ ಮತ್ತೆ ಹುಟ್ಟಿ ಬರುವುದಿಲ್ಲ. ಅವರ ಚಿಂತನೆಗಳು ಮಾತ್ರ ಜೀವಂತವಾಗಿರುತ್ತವೆ ಎಂದು ಶಿಕ್ಷಕ ಎಸ್.ಐ.ಯಳಸಂಗಿ ಹೇಳಿದರು.

ಸಿಂದಗಿ ತಾಲೂಕಿನ ಬ್ರಹ್ಮದೇವನಮಡು ಗ್ರಾಮದ ಅಂಬೇಡ್ಕರ್ ವೃತ್ತದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಡಾ.ಬಿ.ಆರ್. ಅಂಬೇಡ್ಕರ್ ರವರ 133ನೇ ಜನ್ಮದಿನಾಚರಣೆ ಕಾಯ9ಕ್ರಮದಲ್ಲಿ ಅವರು ಮಾತನಾಡಿದರು.

ದೇಶ ಮೌಢ್ಯತೆಯಿಂದ



ಹೊರ ಬರಬೇಕು. ಭಾರತವನ್ನು ಪ್ರೀತಿಸುವುದು ಎಂದರೆ ಮೌಢ್ಯವನ್ನು ವಿರೋಧಿಸಬೇಕು. ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಜಾತಿ ವಗ9ವನ್ನು ಮೀರಿ ಸಮಾಜ–ಕ್ಕೆ ನ್ಯಾಯ ಕೊಡಿಸಿದ್ದಾರೆ. ಅವರ ಚಿಂತನೆಗಳು ಜೀವಂತವಾಗಿರಬೇಕು ಎಂದರೆ ನಿಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಬೇಕು ಎಂದರು.

ಕಾಂಗ್ರೆಸ್ ಯುವ ಮುಖಂಡ ಕೆ.ಬಿ.ಮನಗೂಳಿ ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಮಲ್ಲಿಕಾಜು9ನ ಮನಗೂಳಿ, ಎಚ್.ಕೆ.ಸೀತನೂರ, ರೇವಣಸಿದ್ದ ಕೋರವಾರ, ಶಿವಪ್ಪ ಕರಿಕಲ್ಲ್, ಮಲ್ಲಿಕಾಜು9ನ ಯಲಗೋಡ, ಖಾಸಿಂಸಾಬ್ ರಾಜಾಕೋಳ, ನಬಿಸಾಬ ಸೀತನೂರ, ಬಂದೇನವಾಜ ಸೀತನೂರ, ಡಿ.ಕೆ.ಸೀತನೂರ, ಗೋಲ್ಲಾಳಪ್ಪ ಕರಿಕಲ್ಲ್, ಅಶೋಕ ಕರಿಕಲ್ಲ್, ಹಣಮಂತ ಯಂಟಮಾನ, ಶಿವು ಕೋಟಾರಗಸ್ತಿ, ನಿಂಗಪ್ಪ ಪೂಜಾರಿ, ಕಲ್ಲಪ್ಪ ತೊನಶ್ಯಾಳ, ಮನೋಹರ ದೊಡ್ಡಮನಿ, ಮಲ್ಲು ಕೆಂಭಾವಿ, ಅಮೃತ್ ದೊಡ್ಡಮನಿ, ಹುಚ್ಚಪ್ಪ ಕೆಂಭಾವಿ, ಭೀಮು ಕೆಂಭಾವಿ, ಅಶೋಕ ಯಂಟಮಾನ, ಮುಸ್ತಾಫ್ ಸೀತನೂರ ಸೇರಿದಂತೆ ದಲಿತ ಸಂಘಟನೆ ಪದಾಧಿಕಾರಿಗಳು ಇದ್ದರು.

## ಕಾರ್ಖಾನೆಯಿಂದ ದುಷ್ಪರಿಣಾಮಗಳ ಹಿನ್ನಲೆ ಮಧಬಾವಿ ತಾಂಡಾ ನಂ.1 ನಿವಾಸಿಗಳ ಎಚ್ಚರಿಕೆ

# ಟೈರ್ ಕಾರ್ಖಾನೆ ಬಂದ್ ಮಾಡದಿದ್ದರೆ ಚುನಾವಣೆ ಬಹಿಷ್ಕಾರ!

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಧಬಾವಿ ತಾಂಡಾ ನಂಬರ–1 (ರಾಜಾಜೀ ನಗರ) ಹೊರ ವಲಯದ ಟೈಯರ್ ಕಾರ್ಖಾನೆಯಿಂದ ಅನೇಕ ದುಷ್ಪರಿಣಾಮಗಳು ಸಂಭವಿಸಿರುವ ಹಿನ್ನಲೆಯಲ್ಲಿ ಕಾರ್ಖಾನೆ ಬಂದ್ ಮಾಡಬೇಕು, ಇಲ್ಲವಾದಲ್ಲಿ ಲೋಕಸಭಾ ಚುನಾವಣೆ ಬಹಿಷ್ಕಾರ ಮಾಡುತ್ತೇವೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಗ್ರಾಮ ಪಂಚಾಯಿತಿ ಸದಸ್ಯರಾದ ಪ್ರಕಾಶ ಶ್ರೀಮಂತ ರಾಠೋಡ ಮನವಿ ಸಲ್ಲಿಸಿ ಮಾತನಾಡುತ್ತಾ, ವಿಜಯಪುರ ಜಿಲ್ಲೆ ಹಾಗೂ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಮಧಬಾವಿ ತಾಂಡಾ ನಂಬರ 1ರ ( ರಾಜಾಜೀ ನಗರ) ಹತ್ತಿರದಲ್ಲಿ ಕಳೆದ 5–6 ವರ್ಷಗಳಿಂದ ಅಕ್ರಮವಾಗಿ ನಡೆಯುತ್ತಿರುವ ಟಾಯರ್ ಕಾರ್ಖಾನೆಯಿಂದಾಗಿ ಅಪಾರ ಪ್ರಮಾಣದ ವಿಷಯುಕ್ತ ಹೊಗೆ ಮುಗಿಲೆತ್ತರಕ್ಕೆ ಹೊರಸೂಸುತ್ತಿದ್ದು ಇದರಿಂದಾಗಿ ಸುತ್ತಮುತ್ತಲಿನ ಸುಮಾರು 10 ಹಳ್ಳಿಗಳ ಜನರ ಆರೋಗ್ಯದಲ್ಲಿ ಅನೇಕ ರೀತಿಯ ಸಮಸ್ಯೆಗಳು ಕಂಡುಬಂದಿದ್ದು ಸಾವುನೋವುಗಳು ಉಂಟಾಗಿವೆ. ಇದರಿಂದಾಗಿ ಮಕ್ಕಳಿಗೆ, ಮಯಸ್ಕರಿಗೆ, ವಯೋವೃದ್ಧರಿಗೆ ಅಸ್ತಮಾ, ಬಿ.ಪಿ, ಲಕ್ವಾ, ಹೃದಯ ಸಂಬಂಧಿ, ಪಾರ್ಶ್ವ ವಾಯು, ಚರ್ಮರೋಗ ಮತ್ತು ಉಸಿರಾಟದ ತೊಂದರೆಗಳಾಗಿವೆ ಜೊತೆಗೆ ಬಾಣಂತಿಯರಿಗೆ ಅನೇಕ ಸಮಸ್ಯೆಗಳಾಗಿ ಹೊಟ್ಟೆ ಬಿದ್ದಿರುವ ಘಟನೆಗಳು ನಡೆದಿವೆ,

ಇನ್ನೊರ್ವ ಗ್ರಾ ಪಂ ಸದಸ್ಯ ಪಾಂಡುರಂಗ ಖೇಮು ರಾಠೋಡ ಮಾತನಾಡುತ್ತಾ, ಕಾರ್ಖಾನೆಯ ಅಕ್ಕಪಕ್ಕದಲ್ಲಿ ಸರಕಾರಿ ಶಾಲೆ ಇದ್ದು ಆ ಮಕ್ಕಳಿಗೂ ಸಹ ಇದರ ಬಿಸಿ ತಟ್ಟಿದಂತಾಗಿದೆ, ಸುತ್ತಲೂ ರೈತರ ಬೆಲೆ ಬಾಳುವ ಜಮೀನಿದ್ದು ಬೆಳೆಗಳ ಮೇಲೆ ಈ ವಿಷಯುಕ್ತ ಹೊಗೆ ದೂಳಿನ ಕಣಗಳು ಕುಂತು ರೈತರಿಗೂ ಅಪಾರ ಪ್ರಮಾಣದ




ನಷ್ಟ ಉಂಟಾಗಿವೆ, ಅದೇರೀತಿ ಕಾರ್ಖಾನೆಗೆ ಬಳಸಿರುವ ತ್ಯಾಜ್ಯವನ್ನು ಸಹ ಪಕ್ಕದಲ್ಲಿರುವ ಮಧಬಾವಿ(ಹುಣಶ್ಯಾಳ) ಕೆರೆಯಲ್ಲಿ ಹರಿಸುವುದ–ರಿಂದ ಸಾರ್ವಜನಿಕರಿಗೂ ಹಾಗೂ ಪಶು ಪಕ್ಷಿಗಳಿಗೂ ಸಮಸ್ಯೆಯಾಗಿರುತ್ತದೆ. (ಕುಡಿಯುವ ನೀರಗೆ ಕೆರೆಯೇ ಮೂಲವಾಗಿದೇ)

ಈ ವಿಷಯವನ್ನು ಗಂಭಿರವಾಗಿ ಪರಿಗಣಿಸಿ ಕೂಡಲೇ ಪರಿಸರಕ್ಕೆ ಹಾಗೂ ಸಾರ್ವಜನಿಕರಿಗೆ ಮಾರಕವಾಗಿರುವ ಈ ಟಾಯರ ಕಾರ್ಖಾನೆಯನ್ನು ಬಂದ್ ಮಾಡಬೇಕು, ಇಲ್ಲವಾದಲ್ಲಿ ಬರುವ ಲೋಕಸಭಾ ಚುನಾವಣೆಯನ್ನು ಬಹಿಷ್ಕಾರ ಮಾಡಿ ಹೋರಾಟ ಮಾಡಲಾಗುವುದು. ಈ ಗ್ರಾಮಕ್ಕೆ ಯಾವುದೇ ಚುನಾವಣಾ ಅಧಿಕಾರಿ ಅಥವಾ ಚುನಾವಣಾ ಪಕ್ಷದವರು ಬಂದರೆ ಅವರನ್ನು ಗ್ರಾಮದೊಳಗೆ ಬಿಡದೇ ಉಗ್ರ ಹೋರಾಟ ಮಾಡಲಾಗುವುದು, ಇದು ಈ ಭಾಗದ ಜನಸಾಮನ್ಯರ ಬದುಕಿನ ಪ್ರಶ್ನೆಯಾಗಿದೆ, ಕೂಡಲೇ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳೊಡನೆ ಸ್ಥಳಕ್ಕೆ ಆಗಮಿಸಿ ಸದರಿ ಕಾರ್ಖಾನೆಯನ್ನು ವೀಕ್ಷಿಸಿ ಬಂದ್ ಮಾಡಬೇಕು ಎಂದರು

ಈ ವೇಳೆ ಗ್ರಾ ಪಂ ಸದಸ್ಯರಾದ ಪ್ರಕಾಶ ಶ್ರೀಮಂತ ರಾಠೋಡ, ಪಾಂಡುರಂಗ ಖೇಮು ರಾಠೋಡ, ಮೇಘು ಲಕ್ಕು ರಾಠೋಡ ಹಾಗೂ ಗ್ರಾಮದ ಮುಖಂಡರಾದ, ಸಂಜು ಗಂಗಾರಾಮ ಚವ್ಹಾನ,

ಗೋಪಾಲ ಶಂಕರ ರಾಠೋಡ, ಪ್ರಕಾಶ ಮಾಧು ರಾಠೋಡ, ಪ್ರಕಾಶ ರಮೇಶ ರಾಠೋಡ(ಕಾರಭಾರಿ), ಸತೀಶ ಬಾಸು ಜಾಧವ, ಮೋಹನ ಅಣದು ರಾಠೋಡ , ಅನೀಲ ಸೋಮಲು ರಾಠೋಡ , ಯುವರಾಜ ಮೇಘು ರಾಠೋಡ, ಮನೋಹರ ಕೃಷ್ಣಾ ಚವ್ಹಾಣ , ಪ್ರಕಾಶ ಮೋತಿರಾಮ ರಾಠೋಡ , ಫತ್ತು ಕೀರು ರಾಠೋಡ ಸೇ–ರಿದಂತೆ ಅನೇಕರು ಇದ್ದರು.

# ಸಮಾನತೆಗಾಗಿ ಹೋರಾಡಿದ ಮಹಾ ನಾಯಕ ಡಾ.ಅಂಬೇಡ್ಕರ್

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಶ್ವಜ್ಞಾನಿ ಎಂದು ವಿಶ್ವ ಮಾನ್ಯತೆ ಪಡೆದ ಡಾ ಬಿ ಆರ್ ಅಂಬೇಡ್ಕರ್ ಅವರು ಯಾವುದೇ ಜಾತಿ, ಮತ ಪಂಥ–'ಗಳಿಗೆ ಸೀಮಿತವಾಗದ ಮಹಾನ್ ಮಾನವತಾವಾದಿಯಾಗಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಎಸ್ ಎಂ ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ವತಿಯಿಂದ ವೃತ್ತಿಪರ ಬಾಲಕರ ವಸತಿ ನಿಲಯ ಸಾಯಿಪಾರ್ಕ್ ನಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರು ಶೋಷಿತ ವರ್ಗದವರಿಗಾಗಿ ದೀನ ದಲಿತ–ರಿಗಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟವರು. ಸಮಾಜದ ಎಲ್ಲಾ ವರ್ಗಗಳ ನ್ಯಾಯಕ್ಕಾಗಿ ಶ್ರಮಿಸಿದವರು. ಶೈಕ್ಷಣಿಕ,ಆರ್ಥಿಕ, ಸಾಮಾಜಿಕವಾಗಿ, ಸಮಾನತೆಗಾಗಿ ಹೋರಾಡಿದ ಮಹಾ ನಾಯಕರು. ಮಹಿಳೆಯರ ಬಗ್ಗೆ ವಿಶೇಷವಾದಂತ ಸಾಮಾಜಿಕ ಸ್ಥಾನಮಾನಕ್ಕಾಗಿ ಹೋರಾಡಿದ ಧೀಮಂತ ನಾಯಕ ಹಿಂದುಳಿದ ವರ್ಗಗಳ ಜನರ



ಏಳಿಗೆಗಾಗಿ ಶ್ರಮಿಸಿದರು ಎಂದು ಹೇಳಿದರು.

ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಸಾಯಿ ಪಾರ್ಕ್ ವಸತಿ ನಿಲಯ ಪಾಲಕ ಸದಾನಂದ ಬಡಿಗೇರ ಮಾತನಾಡಿ, ಅಂಬೇಡ್ಕರ್ ಅವರು ಸಮಾಜದ ಕಟ್ಟ ಕಡೆ ವ್ಯಕ್ತಿಗೂ ಸಾಮಾಜಿಕ ಸ್ಥಾನಮಾನ ಕಲ್ಪಿಸಿಕೊಟ್ಟರು. ಸಮಾಜದಲ್ಲಿ ಎಲ್ಲರೂ ನೆಮ್ಮದಿಯಿಂದ ಶಾಂತಿಯುತವಾಗಿ ಬಾಳುವಂತ ಅವಕಾಶ ಕಲ್ಪಿಸಿಕೊಟ್ಟವರು. ಅವರ ಆದರ್ಶಗಳನ್ನು ಎಲ್ಲಾ ವಿದ್ಯಾರ್ಥಿಗಳು ಪಾಲಿಸಿಕೊಂಡು ಹೋಗಬೇಕು. ಅಂಬೇಡ್ಕರ್ ಅವರಂತೆ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಯುಗದಲ್ಲಿ ಶ್ರಮವಹಿಸಿ ಸಾಧನೆಯ ಮೆಟ್ಟಿಲನ್ನು ಹತ್ತಬೇಕು. ಶಿಕ್ಷಣದಲ್ಲಿ ಸಾಧನೆ ಮಾಡಬೇಕೆಂದು ಹೇಳಿದರು

ಉಪನ್ಯಾಸಕರಾಗಿ ಆಗಮಿಸಿದ್ದ ಡಾ. ವಿಶ್ವಾಸ್ ಕೊರವಾರ ಮತ್ತು ಹನುಮಂತ ಮಣೂರ್ ರವರು ಮಾತನಾಡಿ, ಅಂಬೇಡ್ಕರ್ ಅವರ ಸಮಗ್ರ ಜೀವನವೇ ಆದರ್ಶ, ಮಾನವೀಯ ಮೌಲ್ಯ ಶಿಕ್ಷಣ, ಸಮಾನತೆಯ ಪ್ರತಿಪಾದನೆಯ ಪ್ರಮುಖ ಹರಿಕಾರಾಗಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ವೇದಿಕೆ ಮೇಲಿದ್ದ ಅರವಿಂದ ಲಂಬು, ಕೆ ಬಿ ಕೋರೆ, ಬಸವರಾಜ ಸಾವಳಗಿ, ಎ.ಬಿ ಕಲಶೆಟ್ಟಿ, ಎಂ ಎಸ್ ವಾಲಿಕಾರ, ವೀರೇಶ್ ಹೊನವಾಡ, ಯುವ ಸಾಹಿತಿ ಸಾಯಬಣ್ಣ ಮಾದರ, ಉಪಸ್ಥಿತರಿದ್ದರು.

ಜಯಂತೋತ್ಸವದ ಅಂಗವಾಗಿ ವಿದ್ಯಾರ್ಥಿಗಳು ಹಲವು ಕ್ರೀಡಾಕೂಟಗಳನ್ನು ಆಯೋಜಿಸಿದ್ದು ಪ್ರಥಮ ಬಂದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು

ಪಿಯುಸಿಯಲ್ಲಿ ಜಿಲ್ಲೆಗೆ ಉತ್ತಮ ಸಾಧನೆ ಮಾಡಿದ ವಸತಿ ನಿಲಯ ವಿದ್ಯಾರ್ಥಿಯಾದ ಮಲ್ಲಪ್ಪ ಬಸವರಾಜ ಮಾದರ ವಿದ್ಯಾರ್ಥಿಯನ್ನು ವಿಶೇಷವಾಗಿ ಸನ್ಮಾನಿಸಲಾಯಿತು

ಬಾಬು ಗೋಗಿ ನಾಗೇಶ್ ಲೋಹಾರ್ ಮುಂತಾದ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ರೋಟರಿ ಕ್ಲಬ್‌ನಿಂದ ಗೋಶಾಲೆಗೆ ನೀರಿನ ವ್ಯವಸ್ಥೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ರೋಟರಿ ಕ್ಲಬ್ ವಿಜಯಪುರ ಉತ್ತರ ವಲಯದ ವತಿಯಿಂದ ಭಾನುವಾರ ಭೂತನಾಳ ಟ್ಯಾಂಕ್ ಹತ್ತಿರವಿರುವ ಗೋಶಾಲೆಗೆ ಭೇಟಿ ನೀಡಿ ಗೋವುಗಳಿಗೆ ಕುಡಿಯುವ ನೀರಿನ ಟ್ಯಾಂಕ್‌ಗಳನ್ನು ಒದಗಿಸಲಾಯಿತು.

ರೋಟರಿ ಕ್ಲಬ್ ವತಿಯಿಂದ ಹಲವು ಸಾಮಾಜಿಕ ಕಾರ್ಯಗಳನ್ನು ಕೈಗೊಂಡಿದ್ದು, ರೋಟರಿ ಕ್ಲಬ್ 3170ದ ಪ್ರಾಂತದ ಪ್ರಾಂತದ ಗವ್ಹರ್ನರ್ ನಾಸೀರ ಬೋರಸನವಾಲಾ ಅವರು ಕ್ಲಬ್ ವೀಕ್ಷಣೆ ಮಾಡಿ ಕ್ಲಬ್ ವತಿಯಿಂದ ಗೋಶಾಲೆಗಳ ಗೋವುಗಳಿಗೆ



ಕುಡಿಯುವ ನೀರಿನ ವ್ಯವಸ್ಥೆ ಹಾಗೂ ದಿವಟಗೇರಿ ಗಲ್ಲಿಯಲ್ಲಿರುವ ರಾಯರಮಠಕ್ಕೆ ಬರುವ ಭಕ್ತಾದಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆರ್.ಓ. ವಾಟರ್ ಟ್ಯಾಂಕ್ ಒದಗಿಸಲಾಯಿತು.

ಈ ಸಂದರ್ಭದಲ್ಲಿ ಕೋ–ಅಧ್ಯಕ್ಷರಾದ ಮಲ್ಲು ಕಲಾದಗಿ ಅವರು ಮಾತನಾಡಿ, ಗೋವುಗಳ ಸಂರಕ್ಷಣೆ ಅತ್ಯಂತ ಮಹತ್ವದ್ದು ಹಾಗೆಯೇ ಕುಡಿಯುವ ನೀರಿನ ವ್ಯವಸ್ಥೆ ಅತ್ಯವಶ್ಯಕವಾಗಿದೆ. ಈ ನಿಟ್ಟಿನಲ್ಲಿ ರೋಟರಿ ಕ್ಲಬ್ ವತಿಯಿಂದ ಹಲವು ಸಾಮಾಜಿ–ಕ ಕಾರ್ಯಗಳನ್ನು ಮಾಡುತ್ತ ಬಂದಿದ್ದು, ಪ್ರತಿನಿತ್ಯ ವಿವಿಧೆಡೆ ರೋಟರಿ ಕ್ಲಬ್ ವತಿಯಿಂದ ನೀರಿನ ಪ್ಲಾಟ್‌ಗಳನ್ನಿಟ್ಟು ನೀರಿನ ದಾಹ ತೀರಿಸಲು ಪ್ರಯತ್ನಿಸಲಾಗುತ್ತಿದ್ದು, ಸಮಾಜಮುಖ್ಯ ಕಾರ್ಯದಲ್ಲಿ ಪ್ರತಿಯೊಬ್ಬರು ಮುಂದಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಾರ್ಟಟ್ ಅಕೌಂಟೆಂಟ್ ಡಿ.ಎಸ್.ಪಾಟೀಲ, ರೋಟರಿ ಕ್ಲಬ್‌ನ ಎ.ಜಿ. ಚಿದಾನಂದ ಸಿದ್ದಾಪುರ ಮಠ, ರಾಜ ಶಹಾ ಸೇ–ರಿದಂತೆ ಉತ್ತರ ವಲಯದ ರೋಟರಿ ಕ್ಲಬ್‌ನ ಸದಸ್ಯರು ಉಪಸ್ಥಿತರಿದ್ದರು.

# ಮತದಾನ ಜಾಗೃತಿ ಮೂಡಿಸಲು ಬೈಕ್ ರ‍್ಯಾಲಿ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ತಾಲೂಕಾಡಳಿತ, ತಾಲೂಕು ಸ್ವೀಪ್ ಸಮಿತಿ,ಪುರಸಭೆ ಸಹಯೋಗದಲ್ಲಿ ಭಾನುವಾರ ಮತದಾನ ಜಾಗೃತಿ ಮೂಡಿಸಲು ಬೈಕ್ ರ‍್ಯಾಲಿ ಜರುಗಿತು.

ಪಟ್ಟಣದ ಡಾ.ಅಂಬೇಡ್ಕರ ವೃತ್ತದಲ್ಲಿ ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ ಅವರು ಬೈಕ್ ರ‍್ಯಾಲಿಗೆ ಚಾಲನೆ ನೀಡಿದರು. ಡಾ.ಅಂಬೇಡ್ಕರ ವೃತ್ತದಿಂದ ಆರಂಭಗೊಂಡ ಬೈಕ್ ರ‍್ಯಾಲಿ ಲಕ್ಷ್ಮೀ ನಗರ ಮಾರ್ಗವಾಗಿ ಸಂಗೊಳ್ಳಿ ರಾಯಣ್ಣ ವೃತ್ತ, ಬಸವ ಭವನ ಮಾರ್ಗ, ಬಸವೇಶ್ವರ ವೃತ್ತ, ಬಸ್ ನಿಲ್ದಾಣ ಮಾರ್ಗವಾಗಿ ತಹಸೀಲ್ದಾರ ಕಚೇರಿಯವರೆಗೆ ತೆರಳಿ ನಂತರ ಬಸ್ ನಿಲ್ದಾಣ ಮಾರ್ಗವಾಗಿ ಬಸವೇಶ್ವರ ವೃತ್ತಕ್ಕೆ ಆಗಮಿಸಿತು. ನಂತರ ಮೊಂಬತ್ತಿ ಬೆಳಗುವ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು.

ಬಸವೇಶ್ವರ ವೃತ್ತದಲ್ಲಿ ಜರುಗಿದ ಮತದಾನ ಜಾಗೃತಿ ಕಾರ್ಯಕ್ರಮ



ಉದ್ದೇಶಿಸಿ ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ ಮಾತನಾಡಿ, ಈಗ ನಡೆಯುತ್ತಿರುವ ಲೋಕಸಭೆ ಚುನಾವಣೆಯಲ್ಲಿ ಮತದಾರರು ಯಾವುದೇ ಆಸೆ ಆಮಿಷಕ್ಕೆ ಒಳಗಾಗದೇ ಸಂವಿಧಾನ ತಮಗೆ ನೀಡಿರುವ ಮತದಾನ ಎಂಬ ಪವಿತ್ರ ಹಕ್ಕು ಚಲಾಯಿಸುವ ಮೂಲಕ ಪ್ರಾಮಾಣಿಕ ಜನಪ್ರತಿನಿಧಿಗಳನ್ನು ಆಯ್ಕೆ ಮಾಡಬೇಕು. ಉತ್ತಮ ಜನಪ್ರತಿನಿಧಿಗಳನ್ನು ಆಯ್ಕೆ ಮಾಡಿದರೆ ದೇಶದ ಪ್ರಗತಿಗೆ ಸಹಕಾರಿಯಾಗುತ್ತದೆ. ಉತ್ತಮ ಜನಪ್ರತಿನಿಧಿಯನ್ನು ಆಯ್ಕೆ ಮಾಡುವ ಹಕ್ಕು ಮತದಾರರಿಗೆ ಇದೆ. ಮತದಾನವನ್ನು ಪ್ರತಿಯೊಬ್ಬರೂ ಮಾಡುವ ಮೂಲಕ ಮತದಾನ ಹೆಚ್ಚಳವಾಗುವಂತೆ ಸಹಕ–ರಿಸಬೇಕೆಂದರು.

ತಾಪಂ ಇಓ, ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಪ್ರಕಾಶ ದೇಸಾಯಿ ಮಾತನಾಡಿ, ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ಪ್ರತಿಯೊಬ್ಬರೂ ಚಲಾಯಿಸುವ ಮೂಲಕ ಮತದಾನದ ಹೆಚ್ಚಳವಾಗುವಂತೆ ಮಾಡಬೇಕು. 85 ಕ್ಕೆ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮನೆಯಿಂದಲೇ ಮತ ಚಲಾಯಿಸುವ ಹಕ್ಕು ಚುನಾವಣಾ ಆಯೋಗ ನೀಡಿದೆ. ಆಯೋಗ ನೀಡಿದ ಸೌಲಭ್ಯಗಳನ್ನು ಮತದಾರರು ಪಡೆದುಕೊಳ್ಳಬೇಕೆಂದರು.

ಪುರಸಭೆ ಮುಖ್ಯಾಧಿಕಾರಿ ಎಚ್. ಎಸ್.ಚಿತ್ತರಗಿ ಮಾತನಾಡಿ, ಕಳೆದ ವಿಧಾನಸಭೆ ಚುನಾವಣೆಯಲ್ಲಿ ಬಸವನಬಾಗೇವಾಡಿ ಮತಕ್ಷೇತ್ರದಲ್ಲಿ ಶೇ. 70 ರಷ್ಟು ಮತದಾನವಾಗಿದೆ. ಈ ಲೋಕಸಭೆ ಚುನಾವಣೆಯಲ್ಲಿ ಶೇ.100 ರಷ್ಟು ಆಗುವಂತೆ ಮತದಾರರು ಮಾಡಬೇಕೆಂದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಎಇಇ ಜೆ.ಬಿ.ಕಿರಸೂರ, ಹಿಂದುಳಿದ ವರ್ಗಗಳ ಇಲಾಖೆಯ ಅಧಿಕಾರಿ ಸಿ.ಜಿ.ಬಿರಾದಾರ, ಕೃಷಿ ಇಲಾಖೆಯ ಅಧಿಕಾರಿ ಎಂ.ಎಚ್.ಯರಝುರಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಭವಾನಿ ಪಾಟೀಲ, ಪುರಸಭೆ ಆರೋಗ್ಯ ನಿರೀಕ್ಷಕ ಮಹೇಶ ಹಿರೇಮಠ, ವಿಕಲಚೇತನ ಸಂಘದ ಮಲ್ಲಿಕಾರ್ಜುನ ಬಿರಾದಾರ, ಚನ್ನಯ್ಯ ಸಾರಂಗಮಠ, ವಿವಿಧ ಇಲಾಖೆಯ ಅಧಿಕಾರಿಗಳು, ಪುರಸಭೆ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ, ಡಿಎ□□□ಸ್ ಮುಖಂಡರು ಇತರರು ಇದ್ದರು.

# ಏ.18–19ರಂದು ಸಿಇಟಿ ಪರೀಕ್ಷೆ ವ್ಯವಸ್ಥಿತವಾಗಿ ನಡೆಸಿ :ಎಡಿಸಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿವಿಧ ವೃತ್ತಿಪರ ಕೋರ್ಸಗಳ ಪ್ರವೇಶಾತಿಗೆ ಇದೇ ಏಪ್ರಿಲ್ 18 ಹಾಗೂ 19 ರಂದು ಸಾಮಾನ್ಯ ಪ್ರವೇಶ ಪರೀಕ್ಷೆಗಳು (ಸಿಇಟಿ) ವಿವಿಧ 23 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಯನ್ನು ಅತ್ಯಂತ ಅಚ್ಚುಕಟ್ಟು ಹಾಗೂ ವ್ಯವಸ್ಥಿತವಾಗಿ ನಡೆಸುವಂತೆ ಪರೀಕ್ಷೆಗೆ ನಿಯೋಜಿತ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಸೂಚನೆ ನೀಡಿದರು.

ಮಂಗಳವಾರ ಸಂಜೆ ಜಿಲ್ಲಾಧಿಕಾ–ರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ವಿಜಯಪುರ ನಗರದ 21 ಹಾಗೂ ಬಬಲೇಶ್ವರ ಮತ್ತು ತಿಕೋಟಾದಲ್ಲಿ ತಲಾ ಒಂದು ಪರೀಕ್ಷಾ ಕೇಂದ್ರಗಳು ಸೇರಿದಂತೆ ಒಟ್ಟು 23 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಜರುಗಲಿವೆ ಎಂದು ಹೇಳಿದರು.

ಸಾಮಾನ್ಯ ಪ್ರವೇಶ ಪರೀಕ್ಷೆಗೆ ಒಟ್ಟು 11966 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, ಏ.18 ರಂದು ಬೆಳಿಗ್ಗೆ 10–30ರಿಂದ 11–50ರವರೆಗೆ ಜೀವಶಾಸ್ತ್ರ, ಹಾಗೂ ಮಧ್ಯಾಹ್ನ 2–30ರಿಂದ 3–50ರವರೆಗೆ ಗಣಿತ ಪರೀಕ್ಷೆಗಳು ಜರುಗಲಿವೆ. ಅದರಂತೆ ಏ.19ರಂದು ಬೆಳಿಗ್ಗೆ 10–30ರಿಂದ 11–50ರವರೆಗೆ ಭೌತಶಾಸ್ತ್ರ ಹಾಗೂ ಮಧ್ಯಾಹ್ನ 2–30ರಿಂದ3–50ರವರೆಗೆ ರಸಾಯನಶಾಸ್ತ್ರ ಪರೀಕ್ಷೆಗಳು ಜರುಗಲಿದ್ದು, ಪ್ರತಿ 24 ವಿದ್ಯಾರ್ಥಿಗಳಿಗೆ ಓರ್ವ ಕೊಠಡಿ ಮೇಲ್ವಿಚಾರಕರನ್ನು ನೇಮಿಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರೀಕ್ಷೆಗೆ ನಿಯೋಜಿತ ಸಂಬಂಧಿಸಿದ ಅಧಿಕಾರಿಗಳು ಪರೀಕ್ಷಾ ಕೇಂದ್ರಗಳಲ್ಲಿ ನಿಗದಿತ ವಿದ್ಯಾರ್ಥಿಗಳಿಗನುಗುಣವಾಗಿ ಸೂಕ್ತ ಆಸನ ವ್ಯವಸ್ಥೆ, ಪರೀಕ್ಷಾ ಕೊಠಡಿಯಲ್ಲಿ ಸರಿಯಾದ ಗಾಳಿ–ಬೆಳಕಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಸೇ–ರಿದಂತೆ ಎಲ್ಲ ಅಗತ್ಯ ಸಿದ್ಧತೆಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ತಮಗೆ ನಿಗದಿತ ಆಸನಗಳಲ್ಲಿಯ ಕುಳಿತುಕೊಳ್ಳುವಂತೆ ನೋಡಿಕೊಳ್ಳಬೇಕು. ಕಡ್ಡಾಯವಾಗಿ ಪ್ರವೇಶ ಪತ್ರವನ್ನು ಪರಿಶೀಲನೆ ನಡೆಸಿ ಪ್ರವೇಶಾವಕಾಶ ಒದಗಿಸಬೇಕು ಪರೀಕ್ಷೆ ಅವಧಿಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಲಾಗುವುದು ಎಂದು ಅವರು ಹೇಳಿದರು.

ಪ್ರತಿ ಪರೀಕ್ಷಾ ಕೇಂದ್ರಕ್ಕೆ ಓರ್ವ ವೀಕ್ಷಕರಂತೆ ಒಟ್ಟು 23 ವೀಕ್ಷಕರನ್ನು ನೇಮಕ ಮಾಡಿ ಆದೇಶಿಸಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಓರ್ವ ಉಪ ಮುಖ್ಯ ಅಧೀಕ್ಷಕರು, ಓರ್ವ ಪ್ರಶ್ನೆ ಪತ್ರಿಕೆ ಪಾಲಕರು ಮತ್ತು ಓರ್ವ ವಿಶೇಷ ಸ್ಥಾನಿಕ ಜಾಗೃತ ದಳ ಸದಸ್ಯರನ್ನು ನೇಮಕ ಮಾಡಲಾಗಿದೆ. ವೀಕ್ಷಕರು ತಮಗೆ ನಿಯೋಜಿಸಿದ ಪರೀಕ್ಷಾ ಕೇಂದ್ರಗಳಿಗೆ ಒಂದು ಗಂಟೆ ಮುಂಚಿತವಾಗಿ ಹಾಜರಾಗಿ, ಕೊಠಡಿ ಮೇಲ್ವಿಚಾರಕರನ್ನು ನಿಯೋಜಿಸಬೇಕು. ಪರೀಕ್ಷೆಗೆ ನಿಯೋಜಿತ ಎಲ್ಲ ವೀಕ್ಷಕರು, ಮೇಲ್ವಿಚಾರಕರು, ಉಪ ಮುಖ್ಯ ಅಧೀಕ್ಷಕರುಗಳು ವೀಕ್ಷಣಾಧಿಕಾರಿಗಳು, ಜಾಗೃತದಳದ ಅಧಿಕಾರಿಗಳು, ಪ್ರಶ್ನೆ ಪತ್ರಿಕೆ ಮಾರ್ಗಾಧಿಕಾರಿಗಳು, ಸಹ ಮುಖ್ಯ ಅಧಿಕ್ಷಕರು ಸೇರಿದಂತೆ ಪರೀಕ್ಷೆಗೆ ನಿಯೋಜಿತ ಎಲ್ಲ ಅಧಿಕಾ–ರಿಗಳು ಯಾವುದೇ ಲೋಪಗಳಿಗೆ ಅವಕಾಶ ನೀಡದೇ ನಿಯಮಾನುಸಾರ ಜವಾಬ್ದಾರಿಯಿಂದ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ಶಂಕರ ಮಾರಿಹಾರ ಅವರು ಮಾತನಾಡಿ, ಜಿಲ್ಲೆಯ ಎಲ್ಲ 23 ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ ವ್ಯವಸ್ಥೆ ಮಾಡಲಾಗಿದ್ದು, ಯಾವುದೇ ಲೋಪಗಳಿಗೆ ಅವಕಾಶ ನೀಡದೇ ಪೊಲೀಸ್ ಸಿಬ್ಬಂದಿಗಳ ಸಹಕಾರ ಪಡೆದು ಕಟ್ಟುನಿಟ್ಟಿನ ಕ್ರಮ ವಹಿಸಿ ಯಶಸ್ವಿಯಾಗಿ ಪರೀಕ್ಷೆ ನಡೆಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆ ಪ್ರಭಾರ ಉಪ ನಿರ್ದೇಶಕ ಎಲ್.ಆರ್. ಹಳ್ಳದಮನಿ, ಖಜಾನೆ ಇಲಾಖೆ ಉಪನಿರ್ದೇಶಕರು ಸೇ–ರಿದಂತೆ ಪರೀಕ್ಷೆಗೆ ನಿಯೋಜಿತ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಗ್ನಿ ಶಾಮಕ ಸೇವಾ ದಿನಾಚರಣೆ ಸಪ್ತಾಹ ಆಚರಣೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಕಣಕಾಲ ಗ್ರಾಮದಲ್ಲಿ ಸ್ಥಳೀಯ ಅಗ್ನಿಶಾಮಕ ಠಾಣೆಯಿಂದ ಸೋಮವಾರ ಅಗ್ನಿ ಶಾಮಕ ಸೇವಾ ದಿನಾಚರಣೆ ಸಪ್ತಾಹ ಆಚರಣೆ ಅಂಗವಾಗಿ ಅಗ್ನಿ ಸುರಕ್ಷತೆ ಮತ್ತು ಅಗ್ನಿ ಅವಘಡ ಮುಂಜಾಗ್ರತೆ ಬಗ್ಗೆ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.



ನಂತರ ಬೆಂಕಿ ಆಕಸ್ಮಿಕ ಬಗ್ಗೆ ನಾಗರಿಕರಿಗೆ ತಿಳುವಳಿಕೆ ಕುರಿತಾದ ಕರಪತ್ರಗಳನ್ನು ವಿತರಿಸಲಾಯಿತು.

ಅಗ್ನಿಶಾಮಕ ಠಾಣಾಧಿಕಾರಿ ಸಂಗಮೇಶ ಶಿವಪೂಜಿ, ಅಗ್ನಿಶಾಮಕ ಠಾಣೆಯ ಸಹಾಯಕ ಠಾಣಾಧಿಕಾರಿ ಭೀಮಾಶಂಕರ ಮಾದರ, ಸಿಬ್ಬಂದಿಗಳಾದ ನಾರಾಯಣ ರಾಠೋಡ, ಲಿಂಗಪ್ಪ ಲಮಾಣಿ, ಸಂಗಪ್ಪ ಹಳಕಟ್ಟಿ, ಶ್ರೀಶೈಲ ಬಿರಾದಾರ, ಗ್ರಾಮ ಪಂಚಾಯತ ಅಧ್ಯಕ್ಷರು ಮತ್ತು ಪಿಡಿಓ ಇತರರು ಇದ್ದರು.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಪ.ಜಾತಿ–ಪಂಗಡದ ವಸತಿಯುಕ್ತ ಸರಕಾರಿ ಕಾಲೇಜ್ :ಪ್ರವೇಶ ಆರಂಭ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ಆಲಮಟ್ಟಿ ರಸ್ತೆಯಲ್ಲಿರುವ ಹಡಲಗೇರಿ ಗ್ರಾಮ ವ್ಯಾಪ್ತಿಯ ಮಾದರಿ ಪರಿಶಿಷ್ಠ ಜಾತಿ ಪರಿಶಿಷ್ಠ ಪಂಗಡದ ವಸತಿಯುಕ್ತ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2024–25ನೇ ಸಾಲಿಗೆ ಬಿಎ, ಬಿಎಸ್ಸಿ, ಬಿಕಾಂ, ಮತ್ತು ಬಿಸಿಎ ಕೋರ್ಸ್ಗಳಿಗೆ ಪ್ರವೇಶಗಳು ಪ್ರಾರಂಭವಾಗಿವೆ.

ಪ್ರತಿ ಕೋರ್ಸ್ಗೆ 40 ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾತಿಯ ಅವಕಾಶವಿದ್ದು, ಡೋನೇಷನ್ ರಹಿತ ಪ್ರವೇಶವನ್ನು ವಿದ್ಯಾರ್ಥಿಗಳು ಪಡೆಯಬಹುದು. ಈ ಕಾಲೇಜಿನಲ್ಲಿ ಎಲ್ಲಾ ಜಾತಿ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶಾತಿಗೆ ಅವಕಾಶವಿದೆ. ಈ ಕಾಲೇಜು ಕರ್ನಾಟಕ ರಾಜ್ಯದ 10 ವಸತಿಯುಕ್ತ ಕಾಲೇಜುಗಳಲ್ಲಿ ಒಂದಾಗಿದ್ದು, ವಿಜಯಪುರ ಜಿಲ್ಲೆಯಲ್ಲಿ ಬಿಸಿಎ ಕೋರ್ಸ್ನ್ನು ಹೊಂದಿದ ಏಕೈಕ ಸರಕಾರಿ ಕಾಲೇಜು ಇದಾಗಿದೆ. ಸ್ಮಾರ್ಟ್ಕ್ಲಾಸ್ ಸೌಲಭ್ಯ, ಪರಿಣಿತ ಬೋಧಕ–ರಿಂದ ಹಾಗೂ ಉದ್ಯೋಗಾಧಾರಿತ ಉಚಿತ ಕ್ಲಾಸ್‌ಗಳು ಈ ಕಾಲೇಜಿನ ವೈಶಿಷ್ಟ್ಯವಾಗಿದ್ದು, ಆಸಕ್ತರು ಸದುಪಯೋಗ ಪಡೆದುಕೊಳ್ಳುವಂತೆ ಪ್ರಾಂಶುಪಾಲ ಡಾ.ಎಸ್. ಎಲ್.ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 8951191242, 9480994142, 9740853770, 9738636005, 9742729746, 7760605927, 9663290241 ಸಂಪರ್ಕಿಸಬಹುದು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR